ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೧೩

# ಪಟ್ಟಿ – ೦೨

# ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ : ೨೨ನೇ ಸೆಪ್ಟೆಂಬರ್, ೨೦೨೦

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು.

೨. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು.

೩. ನಗರಾಭಿವೃದ್ಧಿ ಸಚಿವರು.

೪. ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು.

೫. ಗಣಿ ಮತ್ತು ಭೂವಿಜ್ಞಾನ ಸಚಿವರು.

೬. ಸಹಕಾರ ಸಚಿವರು.

---

## ರಾಜ್ಯದ ನ್ಯಾಯಬೆಲೆ ಅಂಗಡಿಗಳ ಮಾಲಿಕರ ಕಮೀಷನ್ ಹಣದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೬ (೨೫೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ರಾಜ್ಯದ ನ್ಯಾಯಬೆಲೆ ಅಂಗಡಿ ಮಾಲೀಕರಿಗೆ ಸರ್ಕಾರ ಬಾಕಿ ಉಳಿಸಿಕೊಂಡಿರುವ ರೂ.೯೦ ಕೋಟಿಗೂ ಅಧಿಕ ಕಮೀಷನ್ ಹಣವನ್ನು ೧೦ ದಿನಗಳಲ್ಲಿ ಬಿಡುಗಡೆ ಮಾಡಿದ್ದಲ್ಲಿ ಪಡಿತರ ವಿತರಣೆ ಸ್ಥಗಿತಗೊಳಿಸಿ ಪ್ರತಿಭಟನೆ ನಡೆಸುವುದಾಗಿ ಕರ್ನಾಟಕ ಸರ್ಕಾರಿ ಪಡಿತರ ವಿತರಕರ ಸಂಘ ಎಚ್ಚರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ಕ್ರಮಗಳೇನು ?

## ಬೀದರ್ ಜಿಲ್ಲೆಯಲ್ಲಿ ನಡೆಯುತ್ತಿರುವ ಯುಜಿಡಿ ಮತ್ತು ೨೪/೭ ಕಾಮಗಾರಿಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೭ (೨೫೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ನಗರದಲ್ಲಿ ಜರುಗುತ್ತಿರುವ ಒಳಚರಂಡಿ ಮತ್ತು ೨೪/೭ ಕುಡಿಯುವ ನೀರು ಸರಬರಾಜು ಕಾಮಗಾರಿ ಕಳಪೆ ಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ತನಿಖೆಗೆ ಸರ್ಕಾರ ಕ್ರಮ ಕೈಗೊಳ್ಳುವುದೆಯೇ ;

(ಆ) ಸದರಿ ಕಾಮಗಾರಿಗಳಿಗೆ ಸರ್ಕಾರದಿಂದ ಒಟ್ಟು ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಇಲ್ಲಿಯವರೆಗೆ ಎಷ್ಟು ಕಿ.ಮೀ. ಕಾಮಗಾರಿ ಮುಗಿದಿದೆ ; ಇದಕ್ಕಾಗಿ ಎಷ್ಟು ಹಣ ಖರ್ಚು ಮಾಡಲಾಗಿದೆ ? (ವಿವರವಾದ ಮಾಹಿತಿ ನೀಡುವುದು)

## ಅಕ್ಕಿ ಖರೀದಿಯ ಬಗ್ಗೆ

**ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೪೮ (೨೩೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೯-೨೦ ಮತ್ತು ೨೦-೨೧ನೇ ಸಾಲಿನ ಆಯವ್ಯಯದಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಗೆ ಒದಗಿಸಿರುವ ಅನುದಾನವೆಷ್ಟು ;

(ಆ) ಈ ಅನುದಾನದಲ್ಲಿ ಇಲಾಖೆಯ ನೌಕರರಿಗೆ ವೇತನ ಮತ್ತು ಭತ್ಯೆಗೆ ಎಷ್ಟು ಹಣ ಕಾಯ್ದಿರಿಸಲಾಗಿದೆ ;

(ಇ) ಇಲಾಖೆಯ ಅಕ್ಕಿಯನ್ನು ಯಾವ ದರದಲ್ಲಿ ಖರೀದಿಸಲಾಗುತ್ತಿದೆ ; ಹಾಗೂ ಯಾವ ಯಾವ ಸಂಸ್ಥೆಗಳಿಂದ ಅಕ್ಕಿಯನ್ನು ಖರೀದಿಸಲಾಗುತ್ತಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಆಹಾರ ಪದಾರ್ಥಗಳಿಗೆ ನಿಗಧಿಪಡಿಸಿದ ಹಾಗೂ ವ್ಯಯಿಸಿದ ಮೊತ್ತವೆಷ್ಟು ? (ಸಂಪೂರ್ಣ ವಿವರ ನೀಡುವುದು)

## ರೈತರು ಬೆಳೆವ ಹಣ್ಣು ಹಂಪಲು, ಕಾಯಿಪಲ್ಲೆಗಳನ್ನು ಕೊಳೆಯದಂತೆ ತಡೆಯಲು ಸೂರ್ಯನ ಕಾಂತಿಯಿಂದ ಸೋಲಾರ್ ಸ್ಟೋರೇಜ್ ವ್ಯವಸ್ಥೆಯನ್ನು ಕಲ್ಪಿಸುವ ಬಗ್ಗೆ

**ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೪೯ (೨೯೪) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರೈತರು ಬೆಳೆದ ಹಣ್ಣು ಹಂಪಲು, ಕಾಯಿಪಲ್ಲೆಗಳನ್ನು ಮಾರುಕಟ್ಟೆಯಲ್ಲಿ ಮಾರಾಟ ಮಾಡುತ್ತಿದ್ದು. ಸದರಿ ಪದಾರ್ಥಗಳು ಕೊಳೆತು ಹೋಗುತ್ತಿರುವುದನ್ನು ತಡೆಯಲು ಸೂರ್ಯನ ಕಿರಣದಿಂದ ಸೋಲಾರ್ ಸ್ಟೋರೇಜ್‌ನ್ನು ಸ್ಥಾಪಿಸಲು ಸರ್ಕಾರದ ಹಂತದಲ್ಲಿ ಯೋಜನೆ ರೂಪಿಸಲಾಗಿದೆಯೇ ;

(ಆ) ರೂಪಿಸಿದ್ದಲ್ಲಿ ಇದನ್ನು ಕಾರ್ಯರೂಪಕ್ಕೆ ತರಲು ಯೋಜಿಸಿದೆಯೇ ;

(ಇ) ಹಾಗಿದ್ದಲ್ಲಿ, ಅನುಷ್ಠಾನಕ್ಕೆ ತರಲಾಗುವುದೇ ?

## ಆಹಾರ ಇಲಾಖೆಯಿಂದ ಫುಡ್‌ಕಿಟ್ ವಿತರಣೆ ಕುರಿತು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೦ (೨೬೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಕೋವಿಡ್–೧೯ರ ಲಾಕ್‌ಡೌನ್ ಅವಧಿಯಲ್ಲಿ ಬಡವರಿಗೆ, ನಿರ್ಗತಿಕರಿಗೆ ಫುಡ್‌ಕಿಟ್ ನೀಡಲಾಗಿದೆಯೇ ; ನೀಡಿದ್ದಲ್ಲಿ, ಎಷ್ಟು ಫುಡ್‌ಕಿಟ್‌ಗಳನ್ನು ವಿತರಣೆ ಮಾಡಲಾಗಿದೆ ;

(ಆ) ಕೋವಿಡ್–೧೯ರ ಲಾಕ್‌ಡೌನ್ ಅವಧಿಯಲ್ಲಿ ಬಡವರ ಹಸಿವು ನೀಗಿಸಲು ಇಲಾಖೆ ವತಿಯಿಂದ ತೆಗೆದುಕೊಂಡ ಮುಂಜಾಗ್ರತಾ ಕ್ರಮಗಳೇನು ;

(ಇ) ಕೋವಿಡ್–೧೯ರ ಲಾಕ್‌ಡೌನ್ ಅವಧಿಯಲ್ಲಿ ಸಾರ್ವಜನಿಕರು ಕೆಲಸ ಕಳೆದುಕೊಂಡು ಕೆಲಸ ಸಿಗದೆ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಜನರಿಗೆ ಉದ್ಯೋಗವಕಾಶಗಳನ್ನು ಕಲ್ಪಿಸಲು ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗುವುದು ? (ಸ್ಪಷ್ಟ ಉತ್ತರ ನೀಡುವುದು)

## ಸಹಕಾರ ಸಂಘಗಳ ಅಕ್ರಮ ಕುರಿತು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೧ (೨೭೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ವಿವಿಧ ಸಹಕಾರಿ ಸಂಘ ಸಂಸ್ಥೆಗಳ ಮೇಲೆ ಕಳೆದ ಮೂರು ವರ್ಷಗಳಿಂದ ಬಂದಿರುವ ಗುರುತರವಾದ ಹಣ ದುರುಪಯೋಗದ ಆರೋಪಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ವಿವಿಧ ಸಹಕಾರಿ ಸಂಘ ಸಂಸ್ಥೆಗಳಲ್ಲಿ ನಡೆದಿರುವ ಅಕ್ರಮಗಳಿಗೆ ಸಂಬಂಧಿಸಿದಂತೆ ಈವರೆವಿಗೆ ಲೆಕ್ಕಪರಿಶೋಧನೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಲೆಕ್ಕಸಂಶೋಧನಾ ವರದಿ ನೀಡುವುದು ;

(ಇ) ಲೆಕ್ಕಪರಿಶೋಧನೆ ಮಾಡದೇ ಇದ್ದಲ್ಲಿ, ಲೆಕ್ಕಪರಿಶೋಧನೆ ಮಾಡದೇ ಇರುವ ಅಧಿಕಾರಿಗಳ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರವಾದ ಮಾಹಿತಿ ನೀಡುವುದು)

# ನಾಗಮಂಗಲ ಪಟ್ಟಣ ಪಂಚಾಯಿತಿಯನ್ನು ಪುರಸಭೆಯಾಗಿ ಮೇಲ್ದರ್ಜೆಗೇರಿಸುವ ಕುರಿತು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೨ (೨೭೧) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಾಗಮಂಗಲ ಪಟ್ಟಣ ಪಂಚಾಯಿತಿ ಇತ್ತೀಚೆಗೆ ಪುರಸಭೆಯಾಗಿ ಮೇಲ್ದರ್ಜೆಗೆ ಏರಿರುವುದರಿಂದ ಪುರಸಭೆ ವ್ಯಾಪ್ತಿಗೆ ಒಳಪಡುವ ಪ್ರದೇಶ ವಿಸ್ತಾರವಾಗಿರುವುದರಿಂದ ಪುರಸಭೆ ವ್ಯಾಪ್ತಿಗೆ ಅಗತ್ಯ ಮೂಲ ಸೌಕರ್ಯಗಳಾದ ಯು.ಜಿ.ಡಿ. ರಸ್ತೆ. ಕುಡಿಯುವ ನೀರಿನ ಸೌಲಭ್ಯ ಒದಗಿಸುವ ಯೋಜನೆ ಸರ್ಕಾರದ ಮುಂದೆ ಇದೆಯೇ ; (ಇದ್ದಲ್ಲಿ, ಈ ಯೋಜನೆಯ ವಿವರವಾದ ಮಾಹಿತಿ ನೀಡುವುದು)

(ಆ) ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು ಯಾವಾಗ ;

(ಇ) ಯಾವುದೇ ಯೋಜನೆ ಇಲ್ಲವಾದಲ್ಲಿ ಈ ಪುರಸಭೆ ವ್ಯಾಪ್ತಿಯ ಜನರಿಗೆ ಅಗತ್ಯ ಮೂಲ ಸೌಲಭ್ಯ ನೀಡುವಲ್ಲಿ ಸರ್ಕಾರದ ಮುಂದಿನ ಕ್ರಮಗಳೇನು ;

(ಈ) ನಾಗಮಂಗಲ ತಾಲ್ಲೂಕಿನ ಬೆಳ್ಳೂರು ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೇರಿಸಿರುವುದರಿಂದ ಈ ಪಟ್ಟಣ ಪಂಚಾಯಿತಿಗೆ ಅಗತ್ಯ ಮೂಲ ಸೌಲಭ್ಯ ವಿಸ್ತರಿಸುವುದಕ್ಕೆ ಯೋಜನೆ ರೂಪಿಸಲಾಗಿದೆಯೇ ? (ಯೋಜನೆಯ ಸಂಪೂರ್ಣ ವಿವರ ನೀಡುವುದು)

## ತೋಟಗಾರಿಕೆ ಬೆಳೆಗಳ ಕುರಿತು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೩ (೨೭೦) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆ ನಾಗಮಂಗಲ ಮತ್ತು ಪಾಂಡವಪುರ ವ್ಯಾಪ್ತಿಯಲ್ಲಿ ಅತಿ ಹೆಚ್ಚು ಹಣ್ಣು, ತರಕಾರಿ ಮತ್ತು ಹೂ ಬೆಳೆಯುವಂತಹ ತಾಲ್ಲೂಕುಗಳು ಯಾವುವು ; ಈ ತಾಲ್ಲೂಕುಗಳಲ್ಲಿ ಅಥವಾ ಹೋಬಳಿ ಕೇಂದ್ರಗಳಲ್ಲಿ ಕೋಲ್ಡ್ ಸ್ಟೋರೇಜ್ ಘಟಕ ಸ್ಥಾಪಿಸುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಬೆಳೆಯುವ ಹಣ್ಣು ಮತ್ತು ತರಕಾರಿಗಳನ್ನು ಸಂರಕ್ಷಿಸಲು ಕೋಲ್ಡ್ ಸ್ಟೋರೇಜ್ ಘಟಕ ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದೆ ಇದೆಯೇ ;

(ಇ) ಇದ್ದಲ್ಲಿ, ಮಂಡ್ಯ ಜಿಲ್ಲೆ ವ್ಯಾಪ್ತಿಯ ಯಾವ ಯಾವ ತಾಲ್ಲೂಕು ಕೇಂದ್ರಗಳಲ್ಲಿ ಈ ಘಟಕಗಳನ್ನು ಸ್ಥಾಪಿಸಲು ಸ್ಥಳ ಆಯ್ಕೆ ಮಾಡಲಾಗಿದೆ; ಘಟಕ ಸ್ಥಾಪನೆ ಮಾಡಲು ಮಂಜೂರಾಗಿರುವ ಅನುದಾನವೆಷ್ಟು ; ಮತ್ತು ಕಾಮಗಾರಿ ಯಾವ ಹಂತದಲ್ಲಿದೆ ?

## ಮಂಡ್ಯ ನಗರಸಭೆ ಘನ ತ್ಯಾಜ್ಯ ಕುರಿತು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೪ (೨೬೯) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ನಗರಸಭೆ ವ್ಯಾಪ್ತಿಯಲ್ಲಿ ಅಗತ್ಯ ಮೂಲ ಸೌಲಭ್ಯ ಕಲ್ಪಿಸುವ ಯು.ಜಿ.ಡಿ., ಘನ ತ್ಯಾಜ್ಯ ಸಂಸ್ಕರಣ ಘಟಕ, ಕುಡಿಯುವ ನೀರು ಸೌಲಭ್ಯ ನೀಡಲು ಹೊಸದಾಗಿ ಯೋಜನೆ ತಯಾರಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ ; (ಯೋಜನೆವಾರು ಮಾಹಿತಿ ನೀಡುವುದು)

(ಆ) ಸದರಿ ಯೋಜನೆಗಳಿಗೆ ಮಂಜೂರಾದ ಮೊತ್ತ ಎಷ್ಟು ; ಆ ಪೈಕಿ ಖರ್ಚಾದ ಮೊತ್ತ ಎಷ್ಟು ; (ಯೋಜನೆವಾರು ಪ್ರಗತಿಯ ವಿವರ ನೀಡುವುದು)

(ಇ) ನಗರಸಭೆ ವ್ಯಾಪ್ತಿಯಲ್ಲಿ ಜನಸಂಖ್ಯೆಗೆ ಅನುಗುಣವಾಗಿ ಮೂಲ ಸೌಕರ್ಯ ನೀಡುವಲ್ಲಿ ಸರ್ಕಾರದ ಮುಂದಿನ ನಿರ್ಧಾರವೇನು ?

## ಹುಬ್ಬಳ್ಳಿ ಮಹಾನಗರ ಪಾಲಿಕೆಯ ವ್ಯಾಪ್ತಿಯ ಉಣಕಲ್ ಗ್ರಾಮದ ಪಾಲಿಕೆಯ ಜಮೀನು ಅತಿಕ್ರಮಣ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೫೫ (೨೫೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ವ್ಯಾಪ್ತಿಯ ಉಣಕಲ್ ಗ್ರಾಮದ ರಿ.ಸ.ನಂ.೫೩ ಅ, ಸಿಟಿ ಸರ್ವೆ ನಂ. ೩೧೨೧ ಕ್ಷೇತ್ರ ೪.೩೮ ಎಕರೆ ಜಮೀನು ಆಸ್ತಿ ಪ್ರಕಟಣಾ ಪತ್ರಿಕೆಯಲ್ಲಿ ಅತಿಕ್ರಮಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇಲ್ಲಿಯವರೆಗೂ ಕ್ರಮಕೈಗೊಳ್ಳದಿರಲು ಕಾರಣವೇನು ; ರಿ.ಸ.ನಂ. ೫೩/ಅ, ಸಿ.ಟಿ ಸರ್ವೆ ನಂ ೩೧೨೧

ಇದ್ದದ್ದನ್ನು ಸಿಟಿ ಸರ್ವೆ ನಂ ೩೧೧೬ ಹಾಗೂ ಕ್ಷೇತ್ರವನ್ನು ಆಸ್ತಿ ಪ್ರಕಟಣಾ ಪತ್ರದಲ್ಲಿ ಬದಲಾವಣೆ ಮಾಡಿದ್ದು ನಿಜವೇ ; ನಿಜವಿದ್ದರೆ ಕಾರಣವೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಜಮೀನು ಅತಿಕ್ರಮಣ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಅದರಲ್ಲಿ ಶಾಮೀಲಾದ ಅಧಿಕಾರಿಗಳು ಯಾರು ಯಾರು, ಅವರ ಹೆಸರು ಮತ್ತು ಹುದ್ದೆ ವಿವರ, ಅವರ ಮೇಲೆ ಸರ್ಕಾರ ಏನು ಕ್ರಮ ಕೈಗೊಂಡಿದೆ ; ಅಂತಹ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳುವಲ್ಲಿ ವಿಳಂಬ ಧೋರಣೆ ತೋರಿ ಸರ್ಕಾರ ಭೂಗಳ್ಳರಿಗೆ ಸಹಾಯ ಮಾಡುತ್ತಿರುವುದು ನಿಜವೇ ; ಈಗಾಲಾದರೂ ಸರ್ಕಾರ ಈ ಬಗ್ಗೆ ಗಮನ ಹರಿಸಿ ತನಿಖೆ ನಡೆಸಿ ತಪ್ಪಿತಸ್ಥರ ಮೇಲೆ ಶಿಸ್ತು ಕ್ರಮ ಜರುಗಿಸುವುದೇ ;

(ಇ) ಸದರಿ ಜಮೀನನ್ನು ಮಹಾನಗರಪಾಲಿಕೆ ಸ್ವಾಧೀನಪಡಿಸಿಕೊಂಡಿದೆಯೇ ; ಸ್ವಾಧೀನಪಡಿಸಿಕೊಂಡಿದ್ದರೆ ಅದರ ಆದೇಶ ಸಂಖ್ಯೆ ಮತ್ತು ದಿನಾಂಕ ಒದಗಿಸುವುದು ಇಲ್ಲದಿದ್ದರೆ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುವುದೇ ?

## ಹುಬ್ಬಳ್ಳಿ ಮಹಾನಗರ ಪಾಲಿಕೆಯ ಹೊಸೂರ ವಾಣಿಜ್ಯ ಸಂಕೀರ್ಣ ಕಟ್ಟಡ ಶಿಥಿಲಾವಸ್ಥೆಯಲ್ಲಿರುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೫೬ (೨೪೮) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಬ್ಬಳ್ಳಿ – ಧಾರವಾಡ ಮಹಾನಗರ ಪಾಲಿಕೆಯ ವತಿಯಿಂದ ಹೊಸೂರಿನಲ್ಲಿ ಕಟ್ಟಿದ ವಾಣಿಜ್ಯ ಮಳಿಗೆಗಳ ಸಂಕೀರ್ಣ ಕಟ್ಟಡವನ್ನು ನಿರ್ಮಿಸಿದ್ದು ಯಾವಾಗ ಮತ್ತು ಅಲ್ಲಿ ಎಷ್ಟು ಮಳಿಗೆಗಳನ್ನು ಬಾಡಿಗೆಗೆ ಕೊಡಲಾಗಿದೆ ;

(ಆ) ಶಿಥಿಲಾವಸ್ಥೆಯಲ್ಲಿರುವ ಸದರಿ ಕಟ್ಟಡವನ್ನು ತೆರವುಗೊಳಿಸಿ ಅದನ್ನು ಸಂಪೂರ್ಣವಾಗಿ ಒಡೆದು ಹಾಕಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಸದರಿ ಕಟ್ಟಡದಲ್ಲಿ ಡಾ: ಎಚ್.ಟಿ.ಗಂಗಲ್ ವೈದ್ಯಕೀಯ ಸಂಶೋಧನಾ ಕೇಂದ್ರ ಪ್ರಾರಂಭವಾಗಿ ಸುಮಾರು ವರ್ಷ ಕಳೆದರೂ ಇನ್ನೂವರೆಗೆ ಆ ಕಟ್ಟಡ ಸರಿಯಾದ ರೀತಿಯಿಂದ ದುರಸ್ಥಿ ಆಗದೇ ಸಂಪೂರ್ಣ ಶಿಥಿಲಾವಸ್ಥೆಯಲ್ಲಿರುವುದರಿಂದ ತಕ್ಷಣ ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಸಹಕಾರ ಕ್ಷೇತ್ರದಲ್ಲಿ ರೈತರಿಗೆ ನೀಡುವ ಸಾಲಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೭೭ (೨೩೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಹಕಾರಿ ಕ್ಷೇತ್ರದಲ್ಲಿ ರೈತರಿಗಾಗಿ ಇರುವ ಸಾಲ ಯೋಜನೆಗಳು ಯಾವುವು ; ಯಾವ ಯಾವ ಸಾಲಗಳು ಸಬ್ಸಿಡಿ (ಸಹಾಯಧನ) ಯನ್ನು ಹೊಂದಿವೆ ;

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಎಷ್ಟು ರೈತರುಗಳು ಈ ರೀತಿಯ ಸಾಲಗಳನ್ನು ಪಡೆದಿದ್ದಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ವಾಹನ ಕೊಳ್ಳಲು ರೈತರಿಗೆ ಸಾಲಗಳನ್ನು ನೀಡಲಾಗುತ್ತಿದೆಯೇ ; ಹಾಗೂ ಸಬ್ಸಿಡಿ ನೀಡಲಾಗುತ್ತದೆಯೇ ;

(ಈ) ಈ ಮೇಲ್ಕಂಡ ಜಿಲ್ಲೆಗಳಲ್ಲಿ ಪರಿಶಿಷ್ಟ ಜಾತಿ/ವರ್ಗದ ಎಷ್ಟು ಜನರಿಗೆ ವಾಹನ ಸಾಲ ನೀಡಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಸಹಕಾರ ಸಂಘಗಳ ಮೂಲಕ ರೈತರಿಗೆ ಮಂಜೂರಾಗಿದ್ದ ಜಮೀನಿನ ಸ್ಥಿತಿಗತಿ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೮ (೨೩೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಸಹಕಾರ ಸಂಘಗಳ ಮೂಲಕ ಎಷ್ಟು ರೈತರುಗಳಿಗೆ ಜಮೀನನ್ನು ಮಂಜೂರು ಮಾಡಲಾಗಿದೆ ; ಯಾವಾಗ ಮಂಜೂರಾಗಿದೆ ; ಮತ್ತು ಅದರ ಸ್ಥಿತಿಗತಿ ಏನಾಗಿದೆ ;

(ಆ) ಜಮೀನು ಪಡೆದ ಎಷ್ಟೋ ಜನರು ಈಗ ನಿಧನರಾಗಿದ್ದು, ಅವರ ಮಕ್ಕಳು ಮತ್ತು ಮೊಮ್ಮಕ್ಕಳ ಹೆಸರಿಗೆ ಆ ಜಮೀನಿನ ಮಾಲೀಕತ್ವ ವರ್ಗಾವಣೆಯಾಗದೆ ತೊಂದರೆಯಾಗಿದ್ದು, ಇಂತಹ ಪ್ರಕರಣಗಳನ್ನು ಎಷ್ಟು ದಿವಸಗಳಲ್ಲಿ ಇತ್ಯರ್ಥ ಪಡಿಸಲಾಗುವುದು ;

(ಇ) ಚಾಮರಾಜನಗರ ಜಿಲ್ಲೆ ಮೂಡಲ ಹಳ್ಳಿಯಲ್ಲಿ ಇಂತಹ ಪ್ರಕರಣಗಳು ಇತ್ಯರ್ಥವಾಗದೆ ಬಾಕಿ ಉಳಿದಿದ್ದು ಯಾವಾಗ ಇದನ್ನು ಸರಿಪಡಿಸಲಾಗುವುದು ?

## ಎಸ್‌ಸಿಪಿ/ಟಿಎಸ್‌ಪಿ ಯೋಜನೆಯ ಕಾಮಗಾರಿಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೯ (೨೩೮) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗೆ ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ ಎಷ್ಟು ಹಣ ಮಂಜೂರಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ ಮಂಜೂರಾದ ಹಣದಿಂದ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ;

(ಇ) ಇದಕ್ಕೆ ಖರ್ಚು ಮಾಡಿರುವ ಹಣ ಎಷ್ಟು ? (ವಿವರ ನೀಡುವುದು)

## ತೋಟಗಾರಿಕೆ ಇಲಾಖೆಯಿಂದ ಜಾರಿಗೆ ತಂದಿರುವ ಕಾರ್ಯಕ್ರಮಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೦ (೨೩೯) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ರೈತರಿಗೆ ಅನುಕೂಲವಾಗುವ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ; ಅವುಗಳಿಗೆ ಎಷ್ಟು ಹಣ ಮಂಜೂರು ಮಾಡಲಾಗಿದೆ ;

(ಆ) ಯಾವ ಯಾವ ಯೋಜನೆಗಳಿಂದ ಎಷ್ಟು ರೈತರಿಗೆ ಸಾಲ/ ಸಹಾಯಧನ ನೀಡಲಾಗಿದೆ ; ಎಷ್ಟು ಫಲಾನುಭವಿಗಳು ಇದರ ಪ್ರಯೋಜನ ಪಡೆದಿದ್ದಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಪರಿಶಿಷ್ಟ ಜಾತಿ ಮತ್ತು ವರ್ಗದವರಿಗೆ ಸೇರಿದ ಎಷ್ಟು ರೈತರಿಗೆ ಯಾವ ಯಾವ ಸಾಲಗಳನ್ನು ನೀಡಲಾಗಿದೆ ?

## ಬಿ.ಪಿ.ಎಲ್ ಕಾರ್ಡ್‌ಗಳ ಹಂಚಿಕೆ ಕುರಿತು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೧ (೨೫೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಕಳೆದ ಎರಡು ವರ್ಷಗಳಲ್ಲಿ ಎಷ್ಟು ಬಿ.ಪಿ.ಎಲ್ ಕಾರ್ಡ್‌ಗಳನ್ನು ಹಂಚಲಾಗಿದೆ ; ಎಷ್ಟು ಅರ್ಜಿಗಳು ಇನ್ನು ವಿಲೇವಾರಿಯಾಗಬೇಕಾಗಿದೆ ;

(ಆ) ಬಿ.ಪಿ.ಎಲ್ ಕಾರ್ಡ್‌ಗಳನ್ನು ಹೊಸದಾಗಿ ಹಂಚದಿರಲು ಕಾರಣಗಳೇನು ; ಸರ್ಕಾರಕ್ಕಿರುವ ಅಡಚಣೆಗಳೇನು ;

(ಇ) ಎಷ್ಟು ದಿವಸಗಳಲ್ಲಿ ಬಾಕಿ ಅರ್ಜಿದಾರರಿಗೆ ಬಿ.ಪಿ.ಎಲ್ ಕಾರ್ಡ್‌ಗಳನ್ನು ಹಂಚಲಾಗುವುದು ?

## ವಿಶೇಷ ಆರ್ಥಿಕ ವಲಯದ ಯೋಜನೆಯಡಿ ಭೂ ಸ್ವಾಧೀನ ಪಡಿಸಿಕೊಳ್ಳುವ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೨ (೨೯೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ವಿಶೇಷ ಆರ್ಥಿಕ ವಲಯದ ಯೋಜನೆಯಡಿಯಲ್ಲಿ ಎಷ್ಟು ಎಕರೆ ಜಮೀನನ್ನು ಭೂ ಸ್ವಾಧೀನಪಡಿಸಲಾಗಿದೆ ;

(ಆ) ಸ್ವಾಧೀನಪಡಿಸಿಕೊಂಡ ಜಮೀನುಗಳಲ್ಲಿ ಎಲ್ಲೆಲ್ಲಿ ಎಷ್ಟು ಕೈಗಾರಿಕೆಗಳನ್ನು ಪ್ರಾರಂಭಿಸಲಾಗಿದೆ ; (ವಿವರ ಒದಗಿಸುವುದು)

(ಇ) ಇಂತಹ ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶವನ್ನು ಕಲ್ಪಿಸಲಾಗಿದೆಯೇ ? (ಇಲ್ಲವಾದಲ್ಲಿ ಸೂಕ್ತ ಕಾರಣ ತಿಳಿಸುವುದು)

## ಆಹಾರ ನಿರೀಕ್ಷಕ ಕಾರ್ಯ ಚಟುವಟಿಕೆಗಳ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೩ (೨೯೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಆಹಾರ ನಿರೀಕ್ಷಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಆಹಾರ ನಿರೀಕ್ಷಕರ ಹಾಗೂ ಅವರ ಮೇಲಾಧಿಕಾರಿಗಳ ದಿನನಿತ್ಯದ ಕಾರ್ಯಗಳೇನು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಹಾಲು, ಹಣ್ಣು ತರಕಾರಿ, ಸಿಹಿ ಪದಾರ್ಥ ಹಾಗೂ ಹೋಟೆಲ್‌ಗಳಲ್ಲಿ ಆಹಾರ ಕಲಬೆರಕೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಆಹಾರ ನಿರೀಕ್ಷಕರ ಕಾರ್ಯಚಟುವಟಿಕೆಗೆ ಸರ್ಕಾರ ಸೂಕ್ತ ನಿರ್ದೇಶನ ನೀಡಿ ದಿಟ್ಟ ಕ್ರಮಕ್ಕೆ ಮುಂದಾಗಿದೆಯೇ ? (ವಿವರ ನೀಡುವುದು)

## ಅಕ್ರಮ ಮರಳು ಗಣಿಗಾರಿಕೆ ದುಷ್ಪರಿಣಾಮದ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೪ (೨೯೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಮುಖ್ಯ ನದಿಗಳ ಪಾತ್ರದಲ್ಲಿನ ಅನಿಯಂತ್ರಿತ ಅಕ್ರಮ ಮರಳು ಗಣಿಗಾರಿಕೆಯಿಂದಾಗಿ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗುತ್ತಿರುವುದಲ್ಲದೆ, ಪರಿಸರಕ್ಕೆ ತೀವ್ರ ಹಾನಿ ಮತ್ತು ವಿದ್ಯುತ್ ಉತ್ಪಾದನೆಗೂ ತೊಂದರೆಗಳು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಅಕ್ರಮ ಮರಳುಗಾರಿಕೆಯನ್ನು ತಡೆಗಟ್ಟಿ, ಪರಿಸರವನ್ನು ಸಂರಕ್ಷಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ಈ ಬಗ್ಗೆ ಸರ್ಕಾರ ಕಟ್ಟುನಿಟ್ಟಿನ ಕಾನೂನು ರಚಿಸಲಾಗುವುದೇ ?

## ಕೆ.ಐ.ಎ.ಡಿ.ಬಿ. ವತಿಯಿಂದ ಕೈಗಾರಿಕೆಗಳಿಗಾಗಿ ಭೂಮಿ ಸ್ವಾಧೀನ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೫ (೨೯೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೆ.ಐ.ಎ.ಡಿ.ಬಿ. ವತಿಯಿಂದ ಇದುವರೆವಿಗೂ ಕೈಗಾರಿಕೆಗಳ ಉಪಯೋಗಕ್ಕಾಗಿ ಸ್ವಾಧೀನ ಪಡಿಸಿಕೊಂಡಿರುವ ಭೂಮಿಯ ವಿಸ್ತೀರ್ಣವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೆ.ಐ.ಎ.ಡಿ.ಬಿ. ಯವರು ರೈತರ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳುವಾಗ ಅನುಸರಿಸಿರುವ ಮಾನದಂಡಗಳೇನು ; (ವಿವರಗಳನ್ನು ನೀಡುವುದು)

(ಇ) ಕೆ.ಐ.ಎ.ಡಿ.ಬಿ. ಯವರು ರೈತರ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳುವಾಗ ಸಂಬಂಧಪಟ್ಟ ರೈತರಿಗೆ ಪ್ರತಿ ಎಕರೆಗೆ ಎಷ್ಟು ಪ್ರಮಾಣದ ಪರಿಹಾರ ಧನವನ್ನು ನೀಡಲಾಗಿದೆ ? (ಜಿಲ್ಲಾವಾರು ವಿವರಗಳನ್ನು ನೀಡುವುದು)

## ಜೋಯಿಡಾ ತಾಲ್ಲೂಕಿನ ರಾಮನಗರ ನಿರಾಶ್ರಿತರಿಗೆ ಉಸುಕು ತೆಗೆಯಲು ಸಂಬಂಧಿಸಿದ ಆಡಳಿತ ತೊಂದರೆ ಮಾಡುತ್ತಿರುವ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬ (೧೬೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ರಾಮನಗರದಲ್ಲಿ ಸೂಫಾಡ್ಯಾಮ್ ನಿರ್ಮಾಣಕ್ಕಾಗಿ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಂಡ ಹಿನ್ನೆಲೆಯಲ್ಲಿ ಸದರಿ ಭೂಮಿ ತ್ಯಾಗ ಮಾಡಿದ ನಿರಾಶ್ರಿತರು ಯಾವುದೇ ಉದ್ಯೋಗವಿಲ್ಲದೇ ತಮ್ಮ ಜೀವನ ನಿರ್ವಹಣೆಗೆ ಸಾಲ ಮಾಡಿ ವಾಹನ ತೆಗೆದುಕೊಂಡು ಅಲ್ಲಿಯೇ ಸುತ್ತಮುತ್ತಲಿನ ನದಿ ಪಾತ್ರದಲ್ಲಿ ಮಳೆಗಾಲದಲ್ಲಿ ಬಂದು ಬಿದ್ದಿರುವ ಉಸುಕನ್ನು ತೆಗೆದು ರಫ್ತು ಮಾಡಿ ತಮ್ಮ ಉಪ ಜೀವನ ಸಾಗಿಸುತ್ತಿದ್ದು, ಸಂಬಂಧಿಸಿದ ಇಲಾಖೆಯವರು ಅವರಿಗೆ ತೊಂದರೆ

ಮಾಡಿರುವುದರಿಂದ ಸಮಸ್ತ ರಾಮನಗರ ನಿರಾಶ್ರಿತರು ಉಗ್ರ ಪ್ರತಿಭಟನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಇವರಿಗೆ ಸದರಿ ಮಳೆಗಾಲದಲ್ಲಿ ನದಿ ಪಾತ್ರದಲ್ಲಿ ಬಂದು ಬಿದ್ದಿರುವ ಉಸುಕನ್ನು ರಘು ಪಡಿಸಿಕೊಳ್ಳಲು ಸರ್ಕಾರದ ನಿಯಮದ ಪ್ರಕಾರ ಅವಕಾಶ ಮಾಡಿಕೊಡಲಾಗುವುದೇ ; (ವಿವರ ನೀಡುವುದು)

(ಇ) ಈಗಾಗಲೇ ಜೋಯಿಡಾ ತಾಲ್ಲೂಕಿನ ರಾಮನಗರ ಭಾಗದ ಪಾಂಡರಿ ನದಿಯ ಬೆಳಗಾವಿಯ ಲೋಂಡಾ ಭಾಗದ ಪ್ರದೇಶದಲ್ಲಿ ಉಸುಕು ತೆಗೆಯಲು ಸರ್ಕಾರ ಅನುಮತಿ ನೀಡಿದ್ದು, ೩ ಕಿಲೋ ಮೀಟರ್ ಪಕ್ಕದ ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ರಾಮನಗರ ನದಿಯ ಪಾತ್ರದ ಭಾಗದಲ್ಲೂ ಉಸುಕು ತೆಗೆಯಲು ಸಂಬಂಧಿಸಿದ ಇಲಾಖೆ ತೊಂದರೆ ಮಾಡುತ್ತಿದ್ದು, ಈ ಬಗ್ಗೆ ಸರ್ಕಾರ ಕೂಡಲೇ ಸಂಬಂಧಿಸಿದ ನಿರಾಶ್ರಿತರಿಗೆ ನಿಯಮದಂತೆ ಉಸುಕು ರಘು ಪಡಿಸಲು ಅವಕಾಶ ಮಾಡಿಕೊಡುವುದೇ ? (ವಿವರ ನೀಡುವುದು)

## ಲೇಔಟ್ ಮಾಡಿರುವ ಮಾಲೀಕರಿಂದ ಸಾರ್ವಜನಿಕರಿಗೆ ಸಮಯಕ್ಕೆ ಸರಿಯಾಗಿ ಪರ್‌ಮೀಷನ್ ನೀಡದೆ ತೊಂದರೆ ಮಾಡುತ್ತಿರುವ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೭ (೧೬೭) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಹಳಿಯಾಳ / ಜೋಯಿಡಾ ತಾಲ್ಲೂಕಿನಲ್ಲಿ ಕಳೆದ ೩ ವರ್ಷಗಳಿಂದ ನಿರ್ಮಿಸಲಾಗಿರುವ ಲೇಔಟ್‌ಗಳಾವುವು ; (ಸ್ಥಳ, ಪ್ಲಾಟ್‌ಗಳ ವಿವರ, ಅದಕ್ಕೆ ಸಂಬಂಧಿಸಿದ ಹಕ್ಕುದಾರರು ಈ ಸ್ವತ್ತು ಮಾಡಿದ ಲೇಔಟ್‌ಗಳ ವಿವರಗಳನ್ನು ನೀಡುವುದು)

(ಆ) ಲೇಔಟ್ ಮಾಡಲು ಇರುವ ಮಾನದಂಡಗಳೇನು ; ಎಷ್ಟು ಲೇಔಟ್‌ಗಳು ಅಧಿಕೃತವಾಗಿ ನೋಂದಾವಣೆಗೆ ಸಿದ್ಧವಾಗಿರುತ್ತವೆ ; (ಸವಿಸ್ತಾರ ಮಾಹಿತಿ ನೀಡುವುದು)

(ಇ) ಅಭಿವೃದ್ಧಿ ಶುಲ್ಕ ತುಂಬದೇ ಇದ್ದಲ್ಲಿ ಸೈಟ್ ಮಾರಲು ನಗರ ಸಭೆ / ಪುರಸಭೆ ಅಧಿಕಾರಿಯವರು ಅನುಮತಿ ನೀಡಬಹುದೇ ; ದಾಂಡೇಲಿ / ಹಳಿಯಾಳ ತಾಲ್ಲೂಕಿನ ಎಷ್ಟು ಲೇಔಟ್ ಮಾಲೀಕರು ಇಲ್ಲಿಯವರೆಗೆ ಅಭಿವೃದ್ಧಿ ಶುಲ್ಕ ತುಂಬಿರುತ್ತಾರೆ ; ಎಷ್ಟು ಮಂದಿ ಲೇಔಟ್ ಮಾಲೀಕರು ಅಭಿವೃದ್ಧಿ ಶುಲ್ಕ ತುಂಬಬೇಕಾಗಿರುತ್ತದೆ ; ಅಭಿವೃದ್ಧಿ ಶುಲ್ಕ ತುಂಬದೇ ಇರುವ ಸೈಟ್ ಮಾಲೀಕರಿಗೆ ಸೈಟ್ ಮಾರಲು ಅನುಮತಿ ನೀಡಲಾಗುವುದೇ ; (ವಿವರ ನೀಡುವುದು)

(ಈ) ಈಗಾಗಲೇ ಸಾರ್ವಜನಿಕರ ದೂರಿನ ಪ್ರಕಾರ ಕೆಲವೊಂದು ಸೈಟ್ ಮಾಲೀಕರಿಗೆ ಅಭಿವೃದ್ಧಿ ಶುಲ್ಕ ತುಂಬಿಸಿಕೊಳ್ಳದೇ ಅನಧಿಕೃತವಾಗಿ ನೋಂದಣಿಗೆ ನಗರಸಭೆ / ಪುರಸಭೆ ಅಧಿಕಾರಿಗಳು ಅವಕಾಶ ಕಲ್ಪಿಸಿರುತ್ತಾರೆಂದು ತಿಳಿದು ಬಂದಿದ್ದು, ಈ ವಿಷಯದಲ್ಲಿ ಸರ್ಕಾರ ತನಿಖೆ ಮಾಡಿ ಈ ರೀತಿ ಅವ್ಯವಹಾರ ಮಾಡಿರುವ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳುವುದೇ ; ಇಲ್ಲವೇ ಸದರಿ ವಿಷಯದಲ್ಲಿ ಖಾತರಿಪಡಿಸಿಕೊಳ್ಳಲು ಸಂಬಂಧಿಸಿದ ಜಿಲ್ಲಾಧಿಕಾರಿಯಿಂದ ತನಿಖೆ ಮಾಡಿಸಲಾಗುವುದೇ ? (ವಿವರ ನೀಡುವುದು)

## ಹಾಸನ ನಗರದ ಎಸ್.ಎಂ.ಕೆ. ಬಡಾವಣೆ ಅಭಿವೃದ್ಧಿ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮ (೨೮೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ನಗರದ ಎಸ್.ಎಂ.ಕೆ. ಬಡಾವಣೆಯಲ್ಲಿ ಎಷ್ಟು ನಿವೇಶನಗಳನ್ನು ನಿರ್ಮಾಣ ಮಾಡಲಾಗಿದೆ ; ಹಾಗೂ ಹಂಚಿಕೆ ಮಾಡಿರುವ ನಿವೇಶನಗಳೆಷ್ಟು ; ಹಂಚಿಕೆಯಾಗದೇ ಉಳಿದಿರುವ ನಿವೇಶನಗಳೆಷ್ಟು ; ಇಲ್ಲಿ ವಸತಿ ನಿರ್ಮಾಣ ಮಾಡಲು ಅಗತ್ಯವಿರುವ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆಯೇ ; ಈ ಬಡಾವಣೆಯಲ್ಲಿ ನಿವೇಶನದಾರರಿಗೆ ಮನೆ ಕಟ್ಟಿಕೊಳ್ಳಲು ಪರವಾನಗಿ ನೀಡಲಾಗುತ್ತಿದೆಯೇ ; (ವಿವರ ನೀಡುವುದು)

(ಆ) ಸದರಿ ಬಡಾವಣೆಯು ಅಭಿವೃದ್ಧಿಗಾಗಿ ಇಲ್ಲಿಯುವರೆಗೆ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗಿದೆ ; ಈ ಕಾಮಗಾರಿಗಳ ವೆಚ್ಚವೆಷ್ಟು ; ಈ ಕಾಮಗಾರಿಗಳಿಗಾಗಿ ಇಲ್ಲಿಯವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಈ ಕಾಮಗಾರಿಗಳನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರ ವಿವರಗಳೇನು ; (ಕಾಮಗಾರಿವಾರು ಮಾಹಿತಿ ನೀಡುವುದು)

(ಇ) ಹಾಸನ ನಗರದ ಎಸ್.ಎಂ.ಕೆ. ಬಡಾವಣೆಯ ಅಭಿವೃದ್ಧಿಗಾಗಿ ಕೈಗೊಂಡಿರುವ ಕಾಮಗಾರಿಗಳಲ್ಲಿ ಹಣ ದುರ್ಬಳಕೆಯಾಗಿರುವ ಬಗ್ಗೆ ದೂರುಗಳು ಬಂದಿವೆಯೇ ; ಬಂದಿದ್ದಲ್ಲಿ, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ದೂರುಗಳ ವಿವರದೊಂದಿಗೆ ಮಾಹಿತಿ ನೀಡುವುದು)

## ಆಲೂಗೆಡ್ಡೆ ಬೆಳೆಗಾರರ ಸಮಸ್ಯೆ ನಿವಾರಣೆ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೯ (೨೮೫) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯು ಆಲೂಗೆಡ್ಡೆ ಬೆಳೆಗೆ ಪ್ರಸಿದ್ಧವಾಗಿದ್ದು, ಇತ್ತೀಚಿನ ವರ್ಷಗಳಲ್ಲಿ ಉತ್ತಮ ಗುಣಮಟ್ಟದ ಆಲೂಗೆಡ್ಡೆ ಬಿತ್ತನೆ ಬೀಜಗಳು ದೊರಕದೆ ಜಿಲ್ಲೆಯ ಆಲೂಗೆಡ್ಡೆ ಬೆಳೆಗಾರರು ತುಂಬಾ ನಷ್ಟಕ್ಕೊಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಆಲೂಗೆಡ್ಡೆ ಬೆಳೆ ಹಾಳಾಗಿದೆ ; ಬೆಳೆ ನಷ್ಟದ ಪ್ರಮಾಣವೆಷ್ಟು ; ಬೆಳೆ ನಷ್ಟಕ್ಕೆ ಸರ್ಕಾರವು ನೀಡಿರುವ ಪರಿಹಾರವೆಷ್ಟು ; (ಗ್ರಾಮವಾರು ಮಾಹಿತಿ ನೀಡುವುದು)

(ಇ) ಉತ್ತಮ ಗುಣಮಟ್ಟದ ಆಲೂಗೆಡ್ಡೆ ಬಿತ್ತನೆ ಬೀಜಗಳು ರೈತರಿಗೆ ದೊರಕುವಂತೆ ಮಾಡಲು ಮತ್ತು ಆಲೂಗೆಡ್ಡೆ ಬೆಳೆಗೆ ವೈಜ್ಞಾನಿಕವಾಗಿ ಬೆಲೆ ನಿಗದಿ ಮಾಡಲು ಹಾಗೂ ಸೂಕ್ತ ಬೆಂಬಲ ಬೆಲೆ ನಿಗದಿ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಸಹಕಾರ ಬ್ಯಾಂಕ್ ಹಾಗೂ ಪ್ರಾಥಮಿಕ ಕೃಷಿ ಪತ್ತಿನಿಂದ ರೈತರಿಗೆ ಸಾಲ ವಿತರಣೆಯಲ್ಲಿ ಆಗುತ್ತಿರುವ ತಾರತಮ್ಯಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೦ (೧೬೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿಯಮಿತ ಮತ್ತು ಇದರ ಅಧೀನದಲ್ಲಿರುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ

ಸಂಘಗಳು ರೈತರಿಗೆ ಸಾಲ ವಿತರಣೆ ಮಾಡುವಾಗ ಸರ್ಕಾರದ ಮಾರ್ಗಸೂಚಿಗಳನ್ನು ಪಾಲನೆ ಮಾಡದೆ ತಾರತಮ್ಯ ನೀತಿ ಅನುಸರಿಸುತ್ತಿರುವುದರಿಂದ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ ; ಇಂತಹ ಪ್ರಕರಣಗಳಲ್ಲಿ ಭಾಗಿಯಾಗಿರುವವರ ವಿರುದ್ಧ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ; (ಪ್ರಕರಣವಾರು ಮಾಹಿತಿ ನೀಡುವುದು)

(ಆ) ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿಯಮಿತ ಮತ್ತು ಇದರ ಅಧೀನದಲ್ಲಿರುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಂದ ಯಾವ ಯಾವ ರೀತಿಯ ಸಾಲಗಳನ್ನು ರೈತರಿಗೆ ವಿತರಿಸಲಾಗುತ್ತಿದೆ ; ಈ ಸಾಲಗಳನ್ನು ನೀಡಲು ಅನುಸರಿಸುತ್ತಿರುವ ಮಾನದಂಡಗಳೇನು ; ಸಾಲ ವಿತರಣೆಯಲ್ಲಿ ಆಗುತ್ತಿರುವ ತಾರತಮ್ಯ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಹಾಸನ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿಯಮಿತ ಮತ್ತು ಇದರ ಅಧೀನದಲ್ಲಿರುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಕಳೆದ ೩ ವರ್ಷಗಳಲ್ಲಿ ವಿವಿಧ ಯೋಜನೆಗಳಡಿ ವಿತರಣೆ ಮಾಡಿರುವ ಸಾಲದ ಮೊತ್ತವೆಷ್ಟು ? (ಹೋಬಳಿವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

## ಚನ್ನರಾಯಪಟ್ಟಣ ತಾಲ್ಲೂಕಿನ ರಾಯಸಂದ್ರದಲ್ಲಿನ ಗಣಿಗಾರಿಕೆಯಿಂದಾಗಿರುವ ತೊಂದರೆಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೧ (೧೬೪) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿರುವ ರಾಯಸಂದ್ರ ಕಾವಲು ಅಮೃತ್ ಮಹಲ್‌ಗೆ ಸೇರಿದ ಎಷ್ಟು ಜಮೀನನ್ನು ಮೈಸೂರು ಮಿನರಲ್ಸ್ ಸಂಸ್ಥೆಯು ಗುತ್ತಿಗೆಗೆ ಪಡೆದಿದೆ ;

(ಆ) ಸದರಿ ಜಮೀನನ್ನು ಮೈಸೂರು ಮಿನರಲ್ಸ್ ಸಂಸ್ಥೆಯು ಯಾವಾಗ, ಯಾವ ಮಾರ್ಗಸೂಚಿಗಳನ್ವಯ ಮತ್ತು ಎಷ್ಟು ವರ್ಷಗಳಿಗೆ ಪಡೆದಿದೆ ; (ಸರ್ಕಾರದ ಆದೇಶಗಳನ್ನು ನೀಡುವುದು)

(ಇ) ಸದರಿ ಜಮೀನನ್ನು ಮೈಸೂರು ಮಿನರಲ್ಸ್ ಸಂಸ್ಥೆಯು ಪಡೆಯುವಾಗ ಪಶುಸಂಗೋಪನೆ ಇಲಾಖೆಯು ವಿಧಿಸಿರುವ ಷರತ್ತು ಮತ್ತು ನಿಬಂಧನೆಗಳೇನು ; (ವಿವರ ನೀಡುವುದು)

(ಈ) ಗುತ್ತಿಗೆ ಅವಧಿ ಮುಗಿದ ಮೇಲೆ ಗಣಿಗಾರಿಕೆಯಿಂದ ಈ ಜಮೀನಿನಲ್ಲಿ ಉಂಟಾಗಿರುವ ಗುಂಡಿ, ಕೊರಕಲು ಪ್ರದೇಶಗಳನ್ನು ಸರಿಮಾಡಿಕೊಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಉ) ಸದರಿ ಜಮೀನಿನಲ್ಲಿ ಗಣಿಗಾರಿಕೆ ನಡೆಸುತ್ತಿರುವುದರಿಂದ ರಾಯಸಂದ್ರ ಕಾವಲಿನಲ್ಲಿ ತಳಿ ಸಂವರ್ಧನೆ ಕಾರ್ಯಗಳನ್ನು ಕೈಗೊಳ್ಳಲು ಮತ್ತು ರಾಸುಗಳ ಬೆಳವಣಿಗೆಗೆ ಮತ್ತು ಇತರೆ ಪೂರಕ ಚಟುವಟಿಕೆಗಳಿಗೆ ತೊಂದರೆಗಳಾಗಿವೆಯೇ ? (ವಿವರ ನೀಡುವುದು)

## ಕೆ.ಐ.ಎ.ಡಿ.ಬಿ ವತಿಯಿಂದ ಹಾಸನ ಜಿಲ್ಲೆಯಲ್ಲಿ ಸ್ವಾಧೀನಪಡಿಸಿಕೊಂಡಿರುವ ಭೂವಿವರಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೨ (೧೬೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆ.ಐ.ಎ.ಡಿ.ಬಿ ವತಿಯಿಂದ ಹಾಸನ ಜಿಲ್ಲೆಯಲ್ಲಿ ಎಷ್ಟು ಎಕರೆ ಜಮೀನನ್ನು ಯಾವ ಯಾವ ಉದ್ದೇಶಗಳಿಗಾಗಿ ಭೂಸ್ವಾಧೀನ ಮಾಡಿಕೊಳ್ಳಲಾಗಿದೆ ; (ಸರ್ವೆ ನಂಬರ್ ಸಹಿತ ಸ್ವಾಧೀನ ಪಡಿಸಿಕೊಂಡ ದಿನಾಂಕ ಮತ್ತು ಆದೇಶಗಳೊಂದಿಗೆ ಹೋಬಳಿವಾರು ಮಾಹಿತಿ ನೀಡುವುದು)

(ಆ) ಕೆ.ಐ.ಎ.ಡಿ.ಬಿ ವತಿಯಿಂದ ಹಾಸನ ಜಿಲ್ಲೆಯಲ್ಲಿ ಭೂಸ್ವಾಧೀನ ಮಾಡಿಕೊಂಡಿರುವ ಜಮೀನನ್ನು ಯಾವ ದರಗಳಲ್ಲಿ ಯಾವ ಕೈಗಾರಿಕೆಗಳಿಗೆ ಎಷ್ಟು ವಿಸ್ತೀರ್ಣದ ನಿವೇಶನ ಹಂಚಿಕೆ ಮಾಡಲಾಗಿದೆ ಎಂಬ ವಿವರಗಳನ್ನು ಆದೇಶಗಳ ಸಹಿತ ಒದಗಿಸುವುದು ;

(ಇ) ಕೆ.ಐ.ಎ.ಡಿ.ಬಿ ಒಮ್ಮೆ ಸ್ವಾಧೀನಪಡಿಸಿಕೊಂಡ ಜಮೀನನ್ನು ಎಷ್ಟು ವರ್ಷಗಳ ಒಳಗೆ ಉದ್ದೇಶಿತ ಯೋಜನೆಗೆ ಬಳಸಿಕೊಳ್ಳಬೇಕೆಂಬ ನಿಯಮವಿದೆ ? (ಆದೇಶ / ಅಧಿನಿಯಮ ಸಹಿತ ಮಾಹಿತಿ ನೀಡುವುದು)

## ಸ್ಥಳೀಯಾಡಳಿತ ಸಂಸ್ಥೆಗಳ ಚುನಾವಣೆಯ ಕುರಿತಂತೆ ಮಾಹಿತಿ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೩ (೨೩೪) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸ್ಥಳೀಯಾಡಳಿತ ಸಂಸ್ಥೆಗಳ ಚುನಾವಣೆ ನಡೆದು ಎರಡು ವರ್ಷಗಳು ಕಳೆದಿದ್ದು ಅಧ್ಯಕ್ಷರು / ಉಪಾಧ್ಯಕ್ಷರುಗಳ ಆಯ್ಕೆಯು ವಿಳಂಬವಾಗಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತಂತೆ ಕೈಗೊಂಡ ಕ್ರಮಗಳೇನು ;

(ಆ) ಸ್ಥಳೀಯ ಸಂಸ್ಥೆಗಳಲ್ಲಿ ಆಯ್ಕೆಯ ಪ್ರಕ್ರಿಯೇ ನಡೆಯದಿರುವ ಸ್ಥಳೀಯ ಸಂಸ್ಥೆಗಳೆಷ್ಟು; (ಅಂಕಿ – ಅಂಶಗಳೊಂದಿಗೆ ಮಾಹಿತಿ ಒದಗಿಸುವುದು)

(ಇ) ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ / ಉಪಾಧ್ಯಕ್ಷರ ನೇಮಕಕ್ಕೆ ಸಂಬಂಧಿಸಿದಂತೆ ಮೀಸಲಾತಿ ಬಗ್ಗೆ ಸಂಪೂರ್ಣ ಪಟ್ಟಿಯನ್ನು ಪ್ರಕಟಿಸಲಾಗಿದೆಯೇ ; (ಮಾಹಿತಿ ಒದಗಿಸುವುದು) ಬಾಕಿ ಇದ್ದಲ್ಲಿ, ಬಾಕಿ ಇರುವ ಸ್ಥಳೀಯಾಡಳಿತ ಸಂಸ್ಥೆಗಳ ಮಾಹಿತಿ ಒದಗಿಸುವುದು ?

## ರೈತರ ಸಾಲಮನ್ನಾ ಯೋಜನೆಯ ಕುರಿತು ಮಾಹಿತಿ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೪ (೨೩೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಸಾಲಮನ್ನಾ ಯೋಜನೆಯಿಂದ ಅನುಕೂಲ ಪಡೆದ ರೈತರ ಸಂಖ್ಯೆ ಎಷ್ಟು; (ಕ್ಷೇತ್ರವಾರು ವಿವರ ನೀಡುವುದು)

(ಆ) ಕಳೆದ ಒಂದು ವರ್ಷದಿಂದ ಎಷ್ಟು ಜನ ರೈತರ ಎಷ್ಟು ಮೊತ್ತದ ಸಾಲವನ್ನು ಮನ್ನಾ ಮಾಡಲಾಗಿದೆ ; (ಕ್ಷೇತ್ರವಾರು ವಿವರ ನೀಡುವುದು)

(ಇ) ಸಾಲ ಮನ್ನಾ ಮಾಡಲು ಬಾಕಿ ಇರುವ ರೈತರ ಸಂಖ್ಯೆ ಎಷ್ಟು; ಎಷ್ಟು ಮೊತ್ತದ ಸಾಲ ಮನ್ನಾ ಮಾಡಲು ಬಾಕಿ ಇದೆ ? (ಕ್ಷೇತ್ರವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಮರಳು ಕೇಂದ್ರಗಳ ಕಾರ್ಯವೈಖರಿಗಳ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು):–**

**ಮತ್ತು ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೫ (೨೩೨+೨೩೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಮರಳು ಕೇಂದ್ರಗಳನ್ನು ತೆರೆಯಲಾಗಿದೆ ;

(ಆ) ೨೦೧೯–೨೦ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಮರಳು ಸಾಗಾಣಿಕೆ ಮಾಡಲಾಗಿದೆ ;

(ಇ) ಈ ಮರಳು ಕೇಂದ್ರಗಳಿಂದ ಆಯಾ ಜಿಲ್ಲೆಗಳ ಸರ್ಕಾರಿ ಕಾಮಗಾರಿಗಳಿಗೆ ಎಷ್ಟು ಮರಳು ಬಳಸಲಾಗಿದೆ ;

(ಈ) ೨೦೧೯–೨೦ನೇ ಸಾಲಿನಲ್ಲಿ ಎಷ್ಟು ರಾಜಧನ ಸಂಗ್ರಹಿಸಲಾಗಿದೆ ? (ವಿವರ ಒದಗಿಸುವುದು)

## ರಾಜ್ಯದಲ್ಲಿರುವ ಸಹಕಾರ ಸಂಘಗಳ ಕಾರ್ಯ ವೈಖರಿಗಳ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೬ (೨೧೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮, ೨೦೧೮–೧೯, ೨೦೧೯–೨೦, ೨೦೨೦–೨೧ನೇ ಸಾಲಿನಲ್ಲಿ ಸಹಕಾರ ಸಂಘಗಳ ಮೂಲಕ ವಿತರಿಸಲಾದ ಸಾಲದ ಪ್ರಮಾಣವೆಷ್ಟು ; (ಕ್ಷೇತ್ರವಾರು ಮಾಹಿತಿ ನೀಡುವುದು)

(ಆ) ನೀಡಲಾದ ಸಾಲದಲ್ಲಿ ಇದುವರೆವಿಗೆ ಎಷ್ಟು ವಸೂಲಾಗಿದೆ ;

(ಇ) ರಾಜ್ಯದಲ್ಲಿ ಪ್ರಸ್ತುತ ಯಾವ ಯಾವ ಬಡ್ಡಿ ದರದಲ್ಲಿ ರೈತರಿಗೆ ಸಾಲ ನೀಡಲಾಗುತ್ತಿದೆ ;

(ಈ) ಕಳೆದ ೧ ವರ್ಷದಿಂದ ಅಲ್ಪಾವಧಿ, ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲ ಪಡೆದ ರೈತರೆಷ್ಟು; (ಕ್ಷೇತ್ರವಾರು ವಿವರ ನೀಡುವುದು)

(ಉ) ಸುಸ್ತಿಯಾದ ರೈತರ ಸಂಖ್ಯೆ ಎಷ್ಟು? (ಕ್ಷೇತ್ರವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ನಡೆಯುತ್ತಿರುವ ಮರಳು ಮತ್ತು ಕಲ್ಲುಗಣಿಗಾರಿಕೆಗಳ ಸ್ಥಿತಿಗತಿಗಳ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೭ (೨೧೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅನುಮತಿ ಪಡೆದು ನಡೆಸುತ್ತಿರುವ ಕಲ್ಲುಗಣಿಗಾರಿಕೆ ಮತ್ತು ಮರಳು ಗಣಿಗಾರಿಕೆಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಅನಧಿಕೃತವಾಗಿ ರಾಜ್ಯದಲ್ಲಿ ಗಣಿಗಾರಿಕೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಇಂತಹ ಎಷ್ಟು ಕಡೆಗಳಲ್ಲಿ ಗಣಿಗಾರಿಕೆ ನಡೆಯುತ್ತಿದೆ; (ಸಂಪೂರ್ಣ ವಿವರ ನೀಡುವುದು)

(ಈ) ಅಕ್ರಮ ಗಣಿಗಾರಿಕೆ ನಡೆಸುವವರ ವಿರುದ್ಧ ಸರ್ಕಾರವು ತೆಗೆದುಕೊಂಡ ಕ್ರಮವೇನು? (ಸಂಪೂರ್ಣ ವಿವರ ನೀಡುವುದು)

## ವಾಹನಗಳಿಗೆ ಪೂರೈಸಲಾಗುತ್ತಿರುವ ಇಂಧನದ ಕಲಬೆರಕೆ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೮ (೨೪೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಾಹನಗಳಿಗೆ ಪೂರೈಕೆಯಾಗುತ್ತಿರುವ ಇಂಧನದಲ್ಲಿ ಕಲಬೆರೆಕೆಯಾಗುತ್ತಿರುವುದೆಂಬ ಕೂಗು ಕೇಳಿಬರುತ್ತಿದ್ದು, ಈ ಕುರಿತು ಸರ್ಕಾರದ ನಿಲುವೇನು ;

(ಆ) ಇಂಧನ ಕಲಬೆರಕೆಯನ್ನು ಕಂಡುಹಿಡಿಯಲು ಸರ್ಕಾರಕ್ಕಿರುವ ಮಾನದಂಡಗಳೇನು ;

(ಇ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಇಂತಹ ಕಲಬೆರಕೆಯ ಎಷ್ಟು ಪ್ರಕರಣಗಳನ್ನು ದಾಖಲು ಮಾಡಿಕೊಳ್ಳಲಾಗಿದೆ ;

(ಈ) ದಾಖಲಾದ ಪ್ರಕರಣಗಳಲ್ಲಿ ಶಿಕ್ಷೆಗೆ ಒಳಪಟ್ಟಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಉ) ಇಂಧನ ಕಲಬೆರಕೆ ವ್ಯವಹಾರವನ್ನು ನಿಲ್ಲಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ? (ಮಾಹಿತಿ ನೀಡುವುದು)

## ಪೌರಾಡಳಿತ ಸಂಸ್ಥೆಗಳ ಚುನಾವಣೆ ಮತ್ತು ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಆಯ್ಕೆ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೯ (೨೪೫) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪೌರಾಡಳಿತ ಸಂಸ್ಥೆಗಳ ಚುನಾವಣೆಗಳನ್ನು ಯಾವ ವರ್ಷದಲ್ಲಿ ನಡೆಸಲಾಯಿತು ;

(ಆ) ಸದಸ್ಯರ ಚುನಾವಣೆಯಾದ ನಂತರ ಇಲ್ಲಿಯವರೆಗೂ ಸದರಿ ಸಂಸ್ಥೆಗಳಿಗೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಆಯ್ಕೆ ಆಗದಿರುವುದಕ್ಕೆ ಕಾರಣಗಳೇನು ;

(ಇ) ಪೌರಾಡಳಿತ ಸಂಸ್ಥೆಗಳ ಚುನಾವಣೆಯಾಗಿದ್ದರೂ, ವರ್ಷಗಟ್ಟಲೆ ಅಧ್ಯಕ್ಷ, ಉಪಾಧ್ಯಕ್ಷರ ನೇಮಕಾತಿಯಾಗದೇ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಈ) ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಆಯ್ಕೆಯ ಪ್ರಕ್ರಿಯೆಯನ್ನು ಯಾವ ಕಾಲಮಿತಿಯೊಳಗೆ ಪೂರ್ತಿ ಮಾಡಲಾಗುವುದು ? (ವಿವರ ನೀಡುವುದು)

## ಘನತ್ಯಾಜ್ಯ ನಿರ್ವಹಣೆ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೦ (೨೯೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಘನತ್ಯಾಜ್ಯ ನಿರ್ವಹಣೆ ಇತ್ತೀಚೆಗೆ ಒಂದು ದೊಡ್ಡ ಸಮಸ್ಯೆಯಾಗಿದ್ದು, ಅದರ ನಿರ್ವಹಣೆಗೆ ಸೂಕ್ತ ಫಲಿತಾಂಶಗಳು ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದ ಎಷ್ಟು ಭಾಗಗಳಲ್ಲಿ ಘನತ್ಯಾಜ್ಯ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲಾಗಿದೆ ; ಅವುಗಳೆಲ್ಲವೂ ಹಾಲಿ ಕಾರ್ಯನಿರ್ವಹಿಸುವ ಸ್ಥಿತಿಯಲ್ಲಿವೆಯೇ ;

(ಇ) ಉಳಿದ ನಗರ ಕೇಂದ್ರಗಳಲ್ಲಿ ಯಾವ ಕಾಲಮಿತಿಯಲ್ಲಿ ಘನತ್ಯಾಜ್ಯ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲು ಹಾಗೂ ನಿರ್ವಹಣೆ ಮಾಡಲು ಕ್ರಮ ಕೈಗೊಳ್ಳಲಾಗುವುದು ;

(ಈ) ಈ ಯೋಜನೆಯ ರೂಪುರೇಷೆಗಳ ಬಗ್ಗೆ ವಿವರವಾದ ಮಾಹಿತಿ ನೀಡುವುದು ; ಸದರಿ ಯೋಜನೆಯ ಅನುಷ್ಠಾನಕ್ಕೆ ಸರ್ಕಾರದಿಂದ ಎಷ್ಟು ಹಣವನ್ನು ಮೀಸಲಿಡಲಾಗಿದೆ ?

## ರಾಜ್ಯದಲ್ಲಿನ ರಸಗೊಬ್ಬರ ಕೊರತೆ ನಿವಾರಣೆ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೧೮೧ (೨೪೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಈ ಬಾರಿ ಸಾಕಷ್ಟು ಮಳೆಯಾಗಿದ್ದು, ರೈತರು ಬಿತ್ತನೆಗಾಗಿ ತಯಾರಾಗಿದ್ದು, ರಸಗೊಬ್ಬರದ ಕೊರತೆಯಿಂದ ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಉತ್ತರ ಕರ್ನಾಟಕ ಭಾಗದ ಹಲವಾರು ಜಿಲ್ಲೆಗಳಲ್ಲಿ ಯೂರಿಯಾ ಕೊರತೆಯಿಂದಾಗಿ ರೈತರು ಹಗಲಿರುಳು ಸಂಬಂಧಿಸಿದ ಸಂಸ್ಥೆಗಳ ಬಳಿ ಕಾಯುತ್ತಿದ್ದು, ಇದನ್ನು ನಿವಾರಿಸುವ ನಿಟ್ಟಿನಲ್ಲಿ ಸರ್ಕಾರದಿಂದ ಯಾವ ಕ್ರಮ ಕೈಗೊಂಡಿದೆ ;

(ಇ) ರಸಗೊಬ್ಬರ ಕೊರತೆಯನ್ನು ನಿವಾರಿಸಲು ಸರ್ಕಾರವು ಪ್ರತಿವರ್ಷದಂತೆ ಈ ವರ್ಷವೂ ಕೂಡಾ ಗೊಬ್ಬರದ ದಾಸ್ತಾನನ್ನು ಮಾಡಿಕೊಂಡಿದೆಯೇ ;

(ಈ) ಗೊಬ್ಬರದ ದಾಸ್ತಾನು ಸಾಕಷ್ಟಿದ್ದು, ವ್ಯಾಪಾರಿಗಳು ಕೃತಕ ಕೊರತೆಯನ್ನು ನಿರ್ಮಾಣ ಮಾಡಿ ಅದರಿಂದ ಲಾಭವನ್ನು ಪಡೆದುಕೊಳ್ಳುತ್ತಿರುವ ಬಗ್ಗೆ ವರದಿಯಾಗಿದ್ದು, ಇದರ ಬಗ್ಗೆ ಸರ್ಕಾರದ ನಿಲುವೇನು ;

(ಉ) ಮೇಲಿನ ಎಲ್ಲಾ ಸಮಸ್ಯೆಗಳ ಪರಿಹಾರಕ್ಕಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳಾವುವು ?

## ಲಾಕ್‌ಡೌನ್ ಅವಧಿಯಲ್ಲಿ ಕೃಷಿ ಸಂಬಂಧಿತ ಕಾರ್ಮಿಕರ ಸಮೀಕ್ಷೆಯ ಬಗ್ಗೆ

**ಶ್ರೀ ಸಿ.ಎಂ. ಲಿಂಗಪ್ಪ (ನಾಮನಿರ್ದೇಶನ ಹೊಂದಿದವರು) :–**

೧೮೨ (೨೩೬) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಲಾಕ್‌ಡೌನ್ ಅವಧಿಯಲ್ಲಿ ರಾಜ್ಯ ವ್ಯಾಪ್ತಿ ತೋಟಗಾರಿಕೆ, ರೇಷ್ಮೆ ಹೈನುಗಾರಿಕೆ ಅವಲಂಬಿತ ಎಷ್ಟು ಜನ ಇದ್ದಾರೆ ಎಂದು ಸಮೀಕ್ಷೆ ನಡೆಸಲಾಗಿದೆಯೇ ; (ಸಮೀಕ್ಷೆ ನಡೆಸಿದ್ದರೆ ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಲಾಕ್‌ಡೌನ್ ಅವಧಿಯಲ್ಲಿ ನಷ್ಟಕ್ಕೆ ಗುರಿಯಾದಂತಹ ಇವರುಗಳಿಗೆ ವಿಶೇಷ ಅನುದಾನವನ್ನು ನೀಡಿದೆಯೇ ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಇ) ನೀಡದಿದ್ದಲ್ಲಿ, ಕಾರಣಗಳನ್ನು ನೀಡುವುದು ?

## ಅಕ್ರಮ ಬಿ.ಪಿ.ಎಲ್. ಕಾರ್ಡ್‌ಗಳ ರದ್ದತಿಯ ಬಗ್ಗೆ

**ಶ್ರೀ ಸಿ.ಎಂ. ಲಿಂಗಪ್ಪ (ನಾಮನಿರ್ದೇಶನ ಹೊಂದಿದವರು) :–**

೧೮೩ (೧೭೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆಹಾರ ಇಲಾಖೆಯಲ್ಲಿ ಅಕ್ರಮ ಬಿ.ಪಿ.ಎಲ್. ಕಾರ್ಡ್ ಪತ್ತೆ ಹಚ್ಚಿ ರದ್ದು ಮಾಡುವುದಾಗಿ ಸುತ್ತೋಲೆ ಹೊರಡಿಸಲಾಗಿದೆಯೇ;

(ಆ) ಪ್ರಸ್ತುತ ಎಷ್ಟು ಅಕ್ರಮ ಬಿ.ಪಿ.ಎಲ್. ಕಾರ್ಡ್‌ಗಳನ್ನು ಇಲಾಖೆಯು ಪತ್ತೆ ಹಚ್ಚಿ ರದ್ದುಪಡಿಸಲಾಗಿದೆ ಈ ಬಗ್ಗೆ ವಿವರವಾದ ಮಾಹಿತಿಯನ್ನು ಒದಗಿಸುವುದು ?

## ಕೆ.ಐ.ಎ.ಡಿ.ಬಿ.ಯ ವತಿಯಿಂದ ಮ್ಯಾನುಫಾಕ್ಚರಿಂಗ್ ಕ್ಲಸ್ಟರ್ ಸ್ಥಾಪನೆಯ ಬಗ್ಗೆ

**ಶ್ರೀ ಸಿ.ಎಂ. ಲಿಂಗಪ್ಪ (ನಾಮನಿರ್ದೇಶನ ಹೊಂದಿದವರು) :-**

೧೮೪ (೧೭೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೨೦-೨೧ನೇ ಸಾಲಿನ ಆಯುವ್ಯಯದಲ್ಲಿ ಘೋಷಣೆ ಮಾಡಿದಂತೆ ರಾಮನಗರ ತಾಲ್ಲೂಕಿನ ಹಾರೋಹಳ್ಳಿ ೫ನೇ ಹಂತದ ಕರ್ನಾಟಕ ಕೈಗಾರಿಕ ಪ್ರದೇಶಾಭಿವೃದ್ಧಿ ಮಂಡಳಿ (KIADB) ಕೈಗಾರಿಕಾ ಪ್ರದೇಶಗಳಲ್ಲಿ "ಎಲೆಕ್ಟ್ರಿಕಲ್ ವೆಹಿಕಲ್ಸ್ ಮತ್ತು ಎನರ್ಜಿ ಸ್ಟೋರೇಜ್ ಮ್ಯಾನುಫಾಕ್ಚರಿಂಗ್ ಕ್ಲಸ್ಟರ್"ನ್ನು ಸ್ಥಾಪಿಸಲಾಗಿದೆಯೇ;

(ಆ) ಸ್ಥಾಪಿಸದೇ ಇದ್ದಲ್ಲಿ, ಸ್ಥಾಪಿಸಲಾಗುವುದು ಯಾವಾಗ, ವಿಳಂಬಕ್ಕೆ ಕಾರಣಗಳೇನು ?

## ಸಹಕಾರಿ ಬ್ಯಾಂಕ್‌ಗಳ ಪುನಃಶ್ಚೇತನ ಬಗ್ಗೆ

**ಶ್ರೀ ಸಿ.ಎಂ. ಲಿಂಗಪ್ಪ (ನಾಮನಿರ್ದೇಶನ ಹೊಂದಿದವರು) :-**

೧೮೫ (೧೭೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಎಷ್ಟು ಸಹಕಾರಿ ಸಂಘಗಳಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಅವುಗಳಲ್ಲಿ ಎಷ್ಟು ಸಹಕಾರಿ ಸಂಘಗಳು ಸರ್ಕಾರದ ವ್ಯಾಪ್ತಿಗೊಳಪಡದೆ ನಡೆಯುತ್ತಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸಹಕಾರಿ ಸಂಘಗಳ ಪುನಃಶ್ಚೇತನಕ್ಕೆ ಸರ್ಕಾರ ಹಾಕಿಕೊಂಡ ಕಾರ್ಯಕ್ರಮಗಳೇನು ?

## ಮೈಸೂರು ಮಹಾನಗರ ಪಾಲಿಕೆ ಪೌರಕಾರ್ಮಿಕರ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೮೬ (೨೪೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮಹಾನಗರ ಪಾಲಿಕೆಯಲ್ಲಿ ಖಾಯಂ ಹಾಗೂ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ವಿವರ ನೀಡುವುದು)

(ಆ) ಪ್ರತಿದಿನ ಸದರಿ ಪೌರಕಾರ್ಮಿಕರು ನಿರ್ವಹಿಸುವ ಕಾರ್ಯಗಳಾವುವು;

(ಇ) ಪ್ರತಿದಿನ ಎಷ್ಟು ಸಮಯ ಕಾರ್ಯನಿರ್ವಹಿಸುತ್ತಾರೆ ; ಇವರಿಗೆ ನೀಡಲಾಗುತ್ತಿರುವ ಮಾಸಿಕ ವೇತನ ಮೊತ್ತವೆಷ್ಟು ; ಹಾಗೂ ಚೆಕ್ ಮೂಲಕ ವೇತನ ಪಾವತಿಸಲಾಗುತ್ತಿದೆಯೇ ; (ಪ್ರತ್ಯೇಕವಾಗಿ ವಿವರ ನೀಡುವುದು)

(ಈ) ಸದರಿಯವರಿಗೆ ನೀಡಲಾಗುತ್ತಿರುವ ವಿಶೇಷ ಸವಲತ್ತುಗಳೇನು; (ವಿವರ ನೀಡುವುದು)

(ಉ) ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರನ್ನು ಖಾಯಂಗೊಳಿಸಲು ನಿಯಮ ರೂಪಿಸಲಾಗಿದೆಯೇ ?

## ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ / ಉಪಾಧ್ಯಕ್ಷ ಸ್ಥಾನದ ಚುನಾವಣೆ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೮೭ (೨೪೧) ಮಾನ್ಯ ಪೌರಾಡಳಿತ ಮತ್ತು ತೋಟಗಾರಿಕೆ ಹಾಗೂ ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸ್ಥಳೀಯ ಸಂಸ್ಥೆಗಳಾದ ಪಟ್ಟಣ ಪಂಚಾಯ್ತಿ, ಪುರಸಭೆ ಹಾಗೂ ನಗರಸಭೆಗಳ ಅಧ್ಯಕ್ಷ/ಉಪಾಧ್ಯಕ್ಷರ ಹುದ್ದೆಗಳಿಗೆ ಕಳೆದ ೨ ವರ್ಷಗಳಿಂದ ಚುನಾವಣೆ ನಡೆಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಅಧ್ಯಕ್ಷ/ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಸದಿರುವ ಸ್ಥಳೀಯ ಸಂಸ್ಥೆಗಳ ಒಟ್ಟು ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ಸದರಿ ಸಂಸ್ಥೆಗಳ ಅಧ್ಯಕ್ಷ/ಉಪಾಧ್ಯಕ್ಷರ ಸ್ಥಾನಕ್ಕೆ ಇದುವರೆವಿಗೆ ಚುನಾವಣೆ ನಡೆಸದಿರಲು ಕಾರಣಗಳೇನು ; (ವಿವರ ನೀಡುವುದು)

(ಈ) ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳಿಗೆ ಚುನಾವಣೆ ನಡೆಸಲಾಗುವುದು ?

## ಬಜೆಡ್ಯಾಂನಲ್ಲಿ ಹೊಳೆತ್ತಿ ಸಂಗ್ರಹಿಸಿದ ಮಣ್ಣನ್ನು ಅಕ್ರಮವಾಗಿ ಹೊರಸಾಗಿಸಿರುವ ಬಗ್ಗೆ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):–**

೧೮೮ (೨೦೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಕುಡಿಯುವ ನೀರಿನ ಉದ್ದೇಶಕ್ಕಾಗಿ ಉಡುಪಿ ಜಿಲ್ಲೆಯ ಸೀತಾನದಿ ಎಣ್ಣೆಹೊಳೆ, ಸ್ವರ್ಣನದಿ ಮತ್ತು ಬಜೆಡ್ಯಾಂನಿಂದ ಹೂಳನ್ನು ಎತ್ತಲು ಟೆಂಡರ್‌ನ್ನು ಕರೆಯಲಾಗಿರುತ್ತದೆಯೇ ; ಈ ಟೆಂಡರ್‌ನ್ನು ಪಡೆದ ಸಂಸ್ಥೆಗಳು ಯಾವುವು ; (ವರ್ಷವಾರು, ಟೆಂಡರ್‌ವಾರು ಮಾಹಿತಿಯನ್ನು ಒದಗಿಸುವುದು) ಈ ಟೆಂಡರ್‌ನ ಷರತ್ತುಗಳು ಯಾವುವು ; (ಕರಾರು ಪತ್ರದ ಪ್ರತಿಯನ್ನು ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಕುಡಿಯುವ ನೀರಿನ ಉದ್ದೇಶಕ್ಕಾಗಿ ಉಡುಪಿ ಜಿಲ್ಲೆಯ ಸೀತಾನದಿ ಎಣ್ಣೆಹೊಳೆ, ಸ್ವರ್ಣನದಿ ಮತ್ತು ಬಜೆಡ್ಯಾಂನಿಂದ ಹೂಳನ್ನು ಎತ್ತಲು ಟೆಂಡರ್ ಪಡೆದ ಸಂಸ್ಥೆಗಳು ಹೂಳೆತ್ತಿದ ಮರಳಿನ ಪ್ರಮಾಣವೆಷ್ಟು ; ಈ ಹೂಳನ್ನು ಎತ್ತಲು ತಗಲುವ ಅಂದಾಜು ವೆಚ್ಚವೆಷ್ಟು ; ಅವುಗಳ ಪಾರದರ್ಶಕ ಮತ್ತು ಸಮರ್ಪಕ ವಿಲೇವಾರಿಗೆ ಇಲಾಖೆಯಿಂದ ವಹಿಸಲಾದ ಕ್ರಮಗಳೇನು ; (ಯಾವ ಯಾವ ಉದ್ದೇಶಗಳಿಗೆ ಈ ಮರಳನ್ನು ಬಳಸಲಾಗಿರುತ್ತದೆ)

(ಇ) ಹಂಚಿಕೆ ಮಾಡಲಾದ ಮರಳಿನ ಪ್ರಮಾಣವೆಷ್ಟು ; ಮರಳಿನ ಮಾರಾಟದಿಂದ ಸರ್ಕಾರಕ್ಕೆ ದೊರೆತ ಆದಾಯವೆಷ್ಟು ; (ವರ್ಷವಾರು, ಮರಳಿನ ಸಂಗ್ರಹ, ಹಂಚಿಕೆವಾರು, ಹೂಳೆತ್ತಲು ತಗುಲಿದ ವೆಚ್ಚ ಮತ್ತು ಆದಾಯದ ವಿವರ ನೀಡುವುದು)

(ಈ) ಈ ಸಾಲಿನಲ್ಲಿ ಸಂಗ್ರಹಿಸಲಾದ ಮರಳನ್ನು ಅಕ್ರಮವಾಗಿ ಸಾಗಿಸಲಾಗಿದ್ದು ಇದರಲ್ಲಿ ಹಿರಿಯ ಅಧಿಕಾರಿಗಳು ಶಾಮೀಲಾಗಿರುವ ಬಗ್ಗೆ ಪತ್ರಿಕೆಯಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಜಿಲ್ಲೆಯಲ್ಲಿ ಲಕ್ಷಾಂತರ ರೂ. ಮೌಲ್ಯದ ಮರಳು

ಅಕ್ರಮವಾಗಿ ಸಾಗಾಟವಾಗುತ್ತಿದ್ದರೂ ಯಾವುದೇ ಕ್ರಮವಹಿಸದ ಅಧಿಕಾರಿಗಳ ವಿರುದ್ಧ ಕ್ರಮವನ್ನು ವಹಿಸಲಾಗಿದೆಯೇ ; ಇಲ್ಲವಾದರೆ ಕಾರಣವೇನು ; ಇಲಾಖೆಯಿಂದ ಈ ಬಗ್ಗೆ ಪ್ರಕರಣ ದಾಖಲಿಸಲಾಗಿದೆಯೇ ; ಹಾಗಿದ್ದಲ್ಲಿ ಎಷ್ಟು ಪ್ರಕರಣವನ್ನು ದಾಖಲಿಸಲಾಗಿದೆ ? (FIR ಪ್ರತಿಯನ್ನು ಒದಗಿಸುವುದು)

## ಆಹಾರ ಸುರಕ್ಷತೆ ಮತ್ತು ಗುಣಮಟ್ಟದ ಇಲಾಖೆಯಡಿ ಕೈಗೊಳ್ಳಲಾದ ಕ್ರಮಗಳ ಬಗ್ಗೆ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):–**

೧೮೯ (೨೦೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಆಹಾರ ಕಲಬೆರಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರದಿಂದ ನಿಷೇಧಿಸಲ್ಪಟ್ಟ ರಾಸಾಯನಿಕ ಪದಾರ್ಥಗಳು ಯಾವುವು ; ಅವುಗಳನ್ನು ಯಾವ ಯಾವ ಆಹಾರ ಪದಾರ್ಥಗಳಲ್ಲಿ ಬಳಸಲಾಗುತ್ತಿದೆ ; ಸರ್ಕಾರದ ನಿಷೇಧದ ಹೊರತಾಗಿಯೂ ಆಹಾರ ತಯಾರಿಕೆಯಲ್ಲಿ ನಿಷೇಧಿಸಲ್ಪಟ್ಟ ರಾಸಾಯನಿಕಗಳನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ಕ್ರಮವೇನು ;

(ಆ) ಆಹಾರ ಕಲಬೆರಕೆಯನ್ನು ಪತ್ತೆ ಹಚ್ಚಲು ಯಾವ ಯಾವ ಜಿಲ್ಲೆಗಳಲ್ಲಿ ಪ್ರಯೋಗಾಲಯಗಳನ್ನು ಸ್ಥಾಪಿಸಲಾಗಿದೆ ; ಕಳೆದ ೩ ವರ್ಷಗಳಲ್ಲಿ

ಈ ಪ್ರಯೋಗಾಲಯದಲ್ಲಿ ಪರೀಕ್ಷಿಸಲಾದ ಮತ್ತು ಪತ್ತೆ ಹಚ್ಚಲಾದ ಪ್ರಕರಣಗಳ ಸಂಖ್ಯೆ ಎಷ್ಟು ; (ಪ್ರಯೋಗಾಲಯವಾರು, ತಿಂಗಳವಾರು ಮಾಹಿತಿ ನೀಡುವುದು)

(ಇ) ಹೋಟಲ್‌ಗಳಲ್ಲಿ ಮತ್ತು ಫಾಸ್ಟ್ ಫುಡ್ ತಯಾರಿಕಾ ಅಂಗಡಿಗಳಲ್ಲಿ ಅಜಿನೋಮೋಟೊ ಮತ್ತು ಬಣ್ಣ ತಯಾರಿಸುವ ರಾಸಾಯನಿಕಗಳ ಬಳಕೆಯಿಂದ ಜನ ಸಾಮಾನ್ಯರ ಆರೋಗ್ಯದ ಮೇಲೆ ಮಾದಕ ವಸ್ತುಗಳ ಸೇವನೆಯ ಪರಿಣಾಮಕ್ಕಿಂತಲೂ ಹೆಚ್ಚು ದುಷ್ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಆಹಾರ ಕಲಬೆರಕೆಯನ್ನು ತಡೆಗಟ್ಟಲು ಜಿಲ್ಲೆಗೊಂದರಂತೆ ಪ್ರಯೋಗಾಲಯ ಸ್ಥಾಪಿಸುವ ಉದ್ದೇಶವನ್ನು ಸರ್ಕಾರ ಹೊಂದಿದೆಯೇ ? (ಮಾಹಿತಿಯನ್ನು ಒದಗಿಸುವುದು)

## ದಕ್ಷಿಣ ಕನ್ನಡ ಸಹಕಾರಿ ಸಕ್ಕರೆ ಕಾರ್ಖಾನೆ ಬ್ರಹ್ಮಾವರ ಇದರ ಪುನಃಶ್ಚೇತನದ ಕುರಿತು

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):–**

೧೯೦ (೨೧೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಸಹಕಾರಿ ಸಕ್ಕರೆ ಕಾರ್ಖಾನೆ, ಬ್ರಹ್ಮಾವರ ಪ್ರಾರಂಭವಾದ ದಿನಾಂಕದಿಂದ ಈ ದಿನಾಂಕದವರೆಗೂ ನಡೆದ ಆಡಳಿತ ಮಂಡಳಿಯ ಚುನಾವಣೆಗಳ ಸಂಖ್ಯೆ ಎಷ್ಟು ; ಈ ಚುನಾವಣೆಗಳಲ್ಲಿ ಮತದಾನ ಮಾಡಲು ಅರ್ಹತೆಯನ್ನು ಹೊಂದಿರುವ ಸದಸ್ಯರ ಸಂಖ್ಯೆ ಎಷ್ಟು ; (ಚುನಾವಣಾವಾರು ವಿವರ ನೀಡುವುದು)

(ಆ) ಮತದಾನಕ್ಕೆ ಅರ್ಹತೆಯನ್ನು ಹೊಂದಿರುವ ಸದಸ್ಯರ ಸಂಖ್ಯೆ ಎಷ್ಟು ; (ಪಟ್ಟಿಯನ್ನು ಒದಗಿಸುವುದು)

(ಇ) ಈ ಕಾರ್ಖಾನೆಯಿಂದ ವಿವಿಧ ಲೆಕ್ಕಶೀರ್ಷಿಕೆಯಡಿಯಲ್ಲಿ ಪಾವತಿಗೆ ಬಾಕಿಯಿರುವ ಹಣವೆಷ್ಟು ; ಈ ಕಾರ್ಖಾನೆಯು ನಿಲುಗಡೆಯಾದ ದಿನಾಂಕದಿಂದ ಇಲ್ಲಿಯವರೆಗೆ ವಿವಿಧ ಶೀರ್ಷಿಕೆಯಲ್ಲಿ ಖರ್ಚಾದ ವೆಚ್ಚ ಮತ್ತು ಸಂಗ್ರಹಿಸಿದ ಆದಾಯವೆಷ್ಟು ; (ಲೆಕ್ಕ ಶೀರ್ಷಿಕೆವಾರು ಮಾಹಿತಿಯನ್ನು ಒದಗಿಸುವುದು)

(ಈ) ಈ ಕಾರ್ಖಾನೆಯನ್ನು ಪುನಃಶ್ಚೇತನಗೊಳಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ, ಕಾರ್ಖಾನೆಯ ಅಧೀನದಲ್ಲಿರುವ ೧೧೦ ಎಕರೆ ವಿಸ್ತೀರ್ಣ ಹೊಂದಿರುವ ಕೃಷಿ ಜಮೀನನ್ನು ಕೃಷಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕೃಷಿ ಮತ್ತು ತೋಟಗಾರಿಕಾ ವಿಶ್ವವಿದ್ಯಾನಿಲಯಗಳಿಗೆ ಹಸ್ತಾಂತರಿಸುವ ಯೋಜನೆ ಸರ್ಕಾರದ ಮುಂದಿದೆಯೇ ?

## ಹಾವೇರಿ ಜಿಲ್ಲೆ, ಹಾನಗಲ್ ತಾಲ್ಲೂಕಿನಲ್ಲಿ ಕಲುಷಿತ ನೀರು ಪೂರೈಕೆ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೧ (೧೮೦) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯ ಹಾನಗಲ್ ನಗರದ ಸಾರ್ವಜನಿಕರಿಗೆ ಪ್ರತನಿತ್ಯ ಕುಡಿಯಲು, ಹಾಗೂ ದಿನಬಳಕೆಗೆ ಕಲುಷಿತ ನೀರು ಸರಬರಾಜು ಆಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಇದಕ್ಕೆ ಕಾರಣಗಳೇನು ;

(ಆ) ಕಲುಷಿತ ನೀರು ಪೂರೈಕೆಯಿಂದ ಸಾರ್ವಜನಿಕ ಆರೋಗ್ಯಕ್ಕೆ ತೊಂದರೆಯುಂಟಾದರೆ ಹೊಣೆಗಾರರು ಯಾರು ;

(ಇ) ಹಾವೇರಿ ಜಿಲ್ಲೆಯ ಹಾನಗಲ್ ನಗರದ ಜನರಿಗೆ ಶುದ್ಧ ನೀರು ಪೂರೈಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ; ಹಾಗೂ ಬೇಕಾಗುವ ಕಾಲಾವಕಾಶ ಎಷ್ಟು ?

## ಗುತ್ತಿಗೆ ಪೌರ ಕಾರ್ಮಿಕರ ನೇರ ನೇಮಕಾತಿ ಹಾಗೂ ನೇರ ವೇತನ ಪಾವತಿ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೨ (೨೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಬ್ಬಳ್ಳಿ – ಧಾರವಾಡ ಮಹಾನಗರ ಪಾಲಿಕೆಯ ಗುತ್ತಿಗೆ ಪೌರ ಕಾರ್ಮಿಕರನ್ನು ನೇರ ನೇಮಕಾತಿ ಹಾಗೂ ನೇರ ವೇತನ ಪಾವತಿ ಅಡಿಯಲ್ಲಿ ನೇಮಕಾತಿಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದೆಯೇ ;

(ಆ) ಹಾಗಿದ್ದಲ್ಲಿ ನೇಮಕಾತಿಗೊಳಿಸಲು ಅವಶ್ಯವಿರುವ ಮಾನದಂಡಗಳೇನು ;

(ಇ) ಸದರಿ ಪೌರ ಕಾರ್ಮಿಕರಿಗೆ ನೇರ ನೇಮಕಾತಿ ಹಾಗೂ ನೇರ ವೇತನ ಪಾವತಿ ಜಾರಿಗೊಳಿಸಲು ಸರ್ಕಾರ ವಿಳಂಬ ಮಾಡುತ್ತಿರುವುದಕ್ಕೆ ಕಾರಣಗಳೇನು ;

(ಈ) ಯಾವ ಕಾಲಮಿತಿಯೊಳಗೆ ಜಾರಿಗೊಳಿಸಲು ಕ್ರಮವಹಿಸಲಾಗುವುದು ?

## ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಗುತ್ತಿಗೆ ಕಾರ್ಮಿಕರ ಭವಿಷ್ಯ ನಿಧಿ ನೀಡದಿರುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೩ (೨೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಬ್ಬಳ್ಳಿ – ಧಾರವಾಡ ಮಹಾನಗರ ಪಾಲಿಕೆಯ ಗುತ್ತಿಗೆ ಪೌರ ಕಾರ್ಮಿಕರಿಗೆ ಭವಿಷ್ಯ ನಿಧಿ ವಂತಿಗೆಯನ್ನು ನೀಡದೆ ವಂಚಿಸಿರುವ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಪೌರಕಾರ್ಮಿಕರಿಗೆ ಭವಿಷ್ಯ ನಿಧಿ ವಂತಿಗೆಯನ್ನು ನೀಡದೆ ವಂಚಿಸಿರುವ ಗುತ್ತಿಗೆದಾರರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಇಲ್ಲದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು ; ಯಾವ ಕಾಲಮಿತಿಯೊಳಗಿನ ಕ್ರಮ ಜರುಗಿಸಲಾಗುವುದು ;

(ಈ) ಭವಿಷ್ಯನಿಧಿ ವಂತಿಗೆಯನ್ನು ಪಡೆಯದೇ ವಂಚನೆಗೊಳಗಾದ ಗುತ್ತಿಗೆ ಪೌರಕಾರ್ಮಿಕರಿಗೆ ಸರ್ಕಾರ ಏನು ನೆರವು ನೀಡಿದೆ ?

## ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗುತ್ತಿಗೆ ನೌಕರರಿಗೆ ವೇತನ ನೀಡದೇ ತೊಂದರೆ ಮಾಡುತ್ತಿರುವ ಬಗ್ಗೆ.

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೪ (೧೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಬ್ಬಳ್ಳಿ – ಧಾರವಾಡ ಮಹಾನಗರ ಪಾಲಿಕೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದ ಆಟೋ ಟಿಪ್ಪರ್ ಚಾಲಕರಿಗೆ ಗುತ್ತಿಗೆದಾರರಾದ ಶ್ರೀ ಆದರ್ಶ ಎಂಟರ್‌ಪ್ರೈಸಸ್ ಇವರು ಕಳೆದ ೦೩ ತಿಂಗಳುಗಳಿಂದ ವೇತನ ನೀಡದೆ, ಗುತ್ತಿಗೆ ನೌಕರರಿಗೆ ತೊಂದರೆಯನ್ನುಂಟು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದ ಆಟೋ ಟಿಪ್ಪರ್ ಚಾಲಕರು, ಗುತ್ತಿಗೆದಾರರಿಗೆ ವೇತನವನ್ನು ಕೇಳಿದ್ದಕ್ಕೆ ಕಾನೂನುಬಾಹಿರವಾಗಿ ೫೨ ವಾಹನ ಚಾಲಕರನ್ನು ಕೆಲಸದಿಂದ ತೆಗೆದುಹಾಕಲಾಗಿರುವುದು ನಿಜವೇ ; (ವಿವರ ನೀಡುವುದು)

(ಇ) ಆಟೋ ಟಿಪ್ಪರ್ ಚಾಲಕರಿಗೆ ವೇತನವನ್ನು ನೀಡದೇ ದೌರ್ಜನ್ಯವೆಸಗುತ್ತಿರುವ ಗುತ್ತಿಗೆದಾರರ ಮೇಲೆ ಕ್ರಮ ಕೈಗೊಂಡು, ವಾಹನ ಚಾಲಕರಿಗೆ ನ್ಯಾಯವನ್ನು ಒದಗಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ಎರಗೋಳ ಯೋಜನೆ ಕುರಿತು

**ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೯೫ (೨೯೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಜಿಲ್ಲೆಯ ಬಂಗಾರಪೇಟೆ ತಾಲ್ಲೂಕಿನಲ್ಲಿ ಹಾಲಿ ನಿರ್ಮಾಣದ ಹಂತದಲ್ಲಿರುವ ಎರಗೋಳ (ಕುಡಿಯುವ ನೀರು) ಯೋಜನೆ ಪೂರ್ಣಗೊಳ್ಳುವುದು ಯಾವಾಗ ;

(ಆ) ಈ ಯೋಜನೆ ವಿಳಂಬವಾಗಲು ಕಾರಣಗಳೇನು ;

(ಇ) ಈ ಯೋಜನೆಯ ಅಂದಾಜು ವೆಚ್ಚ ಎಷ್ಟು ; ಹಾಗೂ ನೈಜ ವೆಚ್ಚ ಎಷ್ಟು ? (ವಿವರಗಳನ್ನು ನೀಡುವುದು)

## ತೋಟದ ಬೆಳೆ ಬೆಳೆಯುವ ಪ್ರದೇಶಗಳ ವಿಸ್ತೀರ್ಣದ ಬಗ್ಗೆ

**ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೧೯೬ (೨೬೩) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ತೋಟಗಾರಿಕಾ ಬೆಳೆ ಬೆಳೆಯುವ ಪ್ರದೇಶಗಳ ವಿಸ್ತೀರ್ಣ ಎಷ್ಟು; ಈ ವಿಸ್ತೀರ್ಣದಲ್ಲಿ ಅತೀ ಮುಖ್ಯವಾದ ತೋಟದ ಬೆಳೆಗಳು ಯಾವುವು;

(ಆ) ಈ ತೋಟದ ಬೆಳೆಗಳಿಗೆ ಬೆಳೆ ವಿಮೆ ಯೋಜನೆ ಜಾರಿಯಲ್ಲಿದೆಯೇ; ಇದ್ದಲ್ಲಿ, ಕೋಲಾರ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಿಂದ ರೈತರಿಗೆ ದೊರೆತಿರುವ ಬೆಳೆ ವಿಮಾ ಯೋಜನೆಯ ಮೊತ್ತ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ತೋಟದ ಬೆಳೆಗಳಿಗೆ ಬೆಲೆ ವಿಮೆ ಯೋಜನೆಯ ಸಂಪೂರ್ಣ ಸೌಲಭ್ಯ ದೊರಕಿಸಲು ಇಲಾಖೆಯು ತಂತ್ರಜ್ಞಾನವನ್ನು ಬಳಸಲಾಗುತ್ತಿದೆಯೇ ? (ಮಾಹಿತಿ ನೀಡುವುದು)

## APMC ಮಾರುಕಟ್ಟೆ ವಿಸ್ತೀರ್ಣ ಬಗ್ಗೆ

**ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೧೯೭ (೨೬೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯ ಕೇಂದ್ರ ಸ್ಥಾನವಾದ ಕೋಲಾರದಲ್ಲಿ APMC ಮಾರುಕಟ್ಟೆಯ ವಿಸ್ತೀರ್ಣ ಬಹಳ ಚಿಕ್ಕದಾಗಿದ್ದು, ರೈತರು ಮತ್ತು ವ್ಯಾಪಾರಸ್ಥರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಮಾರುಕಟ್ಟೆಯನ್ನು ವಿಸ್ತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರಗಳನ್ನು ನೀಡುವುದು)

## D.C.C. ಬ್ಯಾಂಕ್ ರೂಪಿಸಿರುವ ಯೋಜನೆ ಅನುಷ್ಠಾನದ ಬಗ್ಗೆ

**ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೧೯೮ (೨೬೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯ D.C.C. ಬ್ಯಾಂಕ್ ರೂಪಿಸಿರುವ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಶಿಷ್ಠಾಚಾರ ಪಾಲನೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರಗಳನ್ನು ನೀಡುವುದು)

(ಆ) ಶಿಷ್ಠಾಚಾರ ಉಲ್ಲಂಘನೆ ಮಾಡಿರುವವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ?

## ನಗರ ಸಭೆಯಲ್ಲಿ ಭೂಸ್ವಾಧೀನ ಪ್ರಕ್ರಿಯೆ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):–**

೧೯೯ (೨೭೫) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ನಗರಸಭೆಯಲ್ಲಿ ಭೂಸ್ವಾಧೀನ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ನಿವೇಶನಗಳನ್ನು ಹಂಚಲು ಅರ್ಜಿಗಳನ್ನು ಆಹ್ವಾನಿಸಲಾಗಿದೆಯೇ;

(ಆ) ಹಾಗಿದ್ದಲ್ಲಿ, ಭೂಸ್ವಾಧೀನ ಪ್ರಕ್ರಿಯೆ ಪ್ರಗತಿಯಲ್ಲಿರುವಾಗಲೇ ಅರ್ಜಿಗಳನ್ನು ಆಹ್ವಾನಿಸಲು ಕಾರಣವೇನು;

(ಇ) ಆಹ್ವಾನಿಸಲಾಗಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾಗಿದೆ;

(ಈ) ಭೂಸ್ವಾಧೀನ ಮಾಡಿಕೊಂಡಿರುವ ಜಮೀನಿನ ಮಾಲೀಕರಿಗೆ ನಿಗಧಿಪಡಿಸಿದ ಬೆಲೆ ಎಷ್ಟು;

(ಉ) ಭೂಸ್ವಾಧೀನ ಮಾಡಿಕೊಂಡಿದ್ದರೆ ಇದುವರೆಗೆ ಬಿಡುಗಡೆ ಮಾಡಲಾದ ಒಟ್ಟು ಹಣವೆಷ್ಟು ?

## ನಗರ ಪ್ರದೇಶಗಳಿಗೆ ಹೊಂದಿಕೊಂಡಂತಿರುವ ಗ್ರಾಮ ಪಂಚಾಯತ್ ಪ್ರದೇಶಗಳನ್ನು ಪಟ್ಟಣ ಪಂಚಾಯಿತಿಗೆ ಸೇರ್ಪಡೆ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೨೦೦ (೨೭೬) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಗರ ಪ್ರದೇಶಕ್ಕೆ ಹೊಂದಿಕೊಂಡಿರುವ ಪ್ರದೇಶಗಳು ವಾಣಿಜ್ಯ ಚಟುವಟಿಕೆಗಳಿಂದ ಬಹಳಷ್ಟು ಮುಂದುವರೆದಿದ್ದರೂ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿಯೇ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಪಟ್ಟಣ ಪಂಚಾಯತ್ ವ್ಯಾಪ್ತಿಗೆ ಬಂದರೆ ಹೆಚ್ಚು ತೆರಿಗೆ ಸಂಗ್ರಹವಾಗುವುದರಿಂದ ಸರ್ಕಾರದ ಬೋಗಸಕ್ಕೆ ವರಮಾನ ಹೆಚ್ಚುತ್ತದೆ ಹಾಗೂ ಆ ಪ್ರದೇಶದ ಅಭಿವೃದ್ಧಿಗೆ ಉತ್ತೇಜನ ನೀಡಿದಂತಾಗುವುದರಿಂದ ಈ ಬಗ್ಗೆ ಸರ್ಕಾರದ ನಿರ್ಧಾರವೇನು;

(ಇ) ಇಂತಹ ಯಾವುದಾದರೂ ಪ್ರದೇಶಗಳನ್ನು ಸರ್ಕಾರ ಗುರುತಿಸಿದೆಯೇ ?

## ರಾಜ್ಯದಲ್ಲಿರುವ ನ್ಯಾಯಬೆಲೆ ಅಂಗಡಿಗಳಲ್ಲಿ ಅಕ್ರಮ ನಡೆಯುತ್ತಿರುವ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೨೦೧ (೨೭೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇಲ್ಲಿಯವರೆಗೆ ಹಂಚಿಕೆಯಾಗರುವ BPL ಮತ್ತು APL ಪಡಿತರ ಚೀಟಿಗಳ ಸಂಖ್ಯೆ ಎಷ್ಟು ;

(ಆ) ಇಲ್ಲಿಯವರೆಗೆ ಹೊಸದಾಗಿ ಸಲ್ಲಿಕೆಯಾದ ಅರ್ಜಿಗಳು ಎಷ್ಟು; ಹಾಗೂ ವಿತರಿಸಿದ ಪಡಿತರಗಳು ಎಷ್ಟು;

(ಇ) ನ್ಯಾಯಬೆಲೆ ಅಂಗಡಿಗಳು ಸಮರ್ಪಕವಾಗಿ ದಿನಸಿ ವಿತರಣೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಇದರ ಬಗ್ಗೆ ಕೈಗೊಂಡ ಕ್ರಮಗಳೇನು;

(ಈ) ನ್ಯಾಯಬೆಲೆ ಅಂಗಡಿಗಳಲ್ಲಿ ಸರ್ಕಾರ ನೀಡುವ ದಿನಸಿ ವಸ್ತುಗಳನ್ನು ಹೊರತುಪಡಿಸಿ ಬೇರೆ ವಸ್ತುಗಳನ್ನು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಇತರೆ ವಸ್ತುಗಳನ್ನು ಖರೀದಿ ಮಾಡಿದರೆ ಮಾತ್ರ ದಿನಸಿ ನೀಡಲಾಗುವುದು ಎಂದು ನ್ಯಾಯಬೆಲೆ ಅಂಗಡಿಯವರು ಒತ್ತಾಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ನೆರೆ ಹಾವಳಿಯಿಂದ ತೋಟಗಾರಿಕಾ ಬೆಳೆಗಳಿಗೆ ಹಾನಿಯಾಗಿರುವ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೨೦೨ (೨೮೨) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೆರೆ ಹಾವಳಿಯಿಂದಾಗಿ ತೋಟಗಾರಿಕೆ ಬೆಳೆಗಾರರಿಗೆ ಆಗಿರುವ ಒಟ್ಟು ನಷ್ಟವೆಷ್ಟು;

(ಆ) ಇಂತಹ ರೈತರಿಗೆ ಸರ್ಕಾರ ನೀಡಿರುವ ಪರಿಹಾರದ ಹಣವೆಷ್ಟು ;

(ಇ) ಲಾಕ್‌ಡೌನ್ ಸಂದರ್ಭದಲ್ಲಿ ತೋಟಗಾರಿಕಾ ಬೆಳೆಗಳನ್ನು ಮಾರುಕಟ್ಟೆಗಳಲ್ಲಿ ಮಾರಾಟ ಮಾಡಲು ಸಾಧ್ಯವಾಗದೆ ಅಪಾರ ನಷ್ಟ ಅನುಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಒಟ್ಟು ಎಷ್ಟು ಪರಿಹಾರವನ್ನು ರೈತರಿಗೆ ನೀಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ವಿಜಯಪುರ ನಗರದಲ್ಲಿ ರಸ್ತೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು) :–**

೨೦೩ (೧೯೨) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ನಗರದಲ್ಲಿ ರಸ್ತೆಗಳು ಹಾಳಾಗಿದ್ದು, ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ರಸ್ತೆಗಳ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಆ) ವಿಜಯಪುರ ನಗರದಲ್ಲಿ ರಸ್ತೆಗಳ ಅಭಿವೃದ್ಧಿಗಾಗಿ ಯಾವ ಯಾವ ಯೋಜನೆಗಳನ್ನು ಕೈಗೊಳ್ಳಲಾಗುತ್ತಿದೆ ? (ಸಂಪೂರ್ಣ ವಿವರ ನೀಡುವುದು)

## ಕೋವಿಡ್ –೧೯ ಸಂದರ್ಭದಲ್ಲಿ ಆಹಾರ ಕಿಟ್ ವಿತರಣೆ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಠೋಡ್ (ನಾಮ ನಿರ್ದೇಶನ ಹೊಂದಿದವರು) :–**

೨೦೪ (೧೯೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೋವಿಡ್–೧೯ ಸಂದರ್ಭದಲ್ಲಿ ಇದುವರೆಗೆ ಆಹಾರ ಇಲಾಖೆಯಿಂದ ಎಷ್ಟು ಆಹಾರ ಕಿಟ್ ವಿತರಣೆಯಾಗಿದೆ;

(ಆ) ವಿತರಿಸಿದ್ದಲ್ಲಿ ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು ?

## ಅನ್ನಭಾಗ್ಯ ಯೋಜನೆ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಠೋಡ್ (ನಾಮ ನಿರ್ದೇಶನ ಹೊಂದಿದವರು) :–**

೨೦೫ (೧೮೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದಿಂದ ಅನ್ನಭಾಗ್ಯ ಯೋಜನೆ ಜಾರಿಗೊಳಿಸಿದ ಬಳಿಕ ಆಹಾರ ಭದ್ರತಾ ಕಾಯ್ದೆ ಅನುಷ್ಠಾನವಾಗಿರುವುದರಿಂದ ಕಳೆದ ೩ ವರ್ಷಗಳಿಂದ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಬಂದಿರುವ ಅನುದಾನ ಎಷ್ಟು;

(ಆ) ಇದರಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರದ ಪಾಲು ಎಷ್ಟು; (ವಿವರ ನೀಡುವುದು)

(ಇ) ಅನ್ನಭಾಗ್ಯ ಯೋಜನೆಗೆ ಅಕ್ಕಿಯನ್ನು ಯಾವ ರಾಜ್ಯದಿಂದ ತರಿಸಲಾಗುತ್ತದೆ; ಈ ಅಕ್ಕಿಗೆ ಎಷ್ಟು ದರ ನಿಗಧಿಗೊಳಿಸಲಾಗಿದೆ ? (ವರ್ಷವಾರು ವಿವರ ನೀಡುವುದು)

## ಬೃಹತ್ ಹಾಗೂ ಮಧ್ಯಮ ಕೈಗಾರಿಕೆಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು) :–**

೨೦೬ (೧೯೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಬೃಹತ್ ಹಾಗೂ ಮಧ್ಯಮ ವರ್ಗದ ಕೈಗಾರಿಕೆಗಳಾವುವು; ಸರ್ಕಾರಿ ಹಾಗೂ ಖಾಸಗಿ ಒಡೆತನದ ಕಂಪನಿಗಳ ವಿವರ ನೀಡುವುದು;

(ಆ) ಪ್ರತಿ ಕಂಪನಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರು ಹಾಗೂ ಇತರೆ ಸಿಬ್ಬಂದಿಗಳೆಷ್ಟು; ಸದರಿಯವರಿಗೆ ನೀಡಲಾಗುತ್ತಿರುವ ವೇತನ ಮತ್ತು ಇತರೆ ವಿವರ ನೀಡುವುದು ?

## ರೇಷ್ಮೆ ಬೆಳೆಯ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು) :–**

೨೦೭ (೧೮೯) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ರೇಷ್ಮೆ ಬೆಳೆಯಲಾಗುತ್ತದೆ; (ವಿವರ ನೀಡುವುದು)

(ಆ) ರಾಜ್ಯದ ಹಲವು ಜಿಲ್ಲೆಗಳಲ್ಲಿ ರೇಷ್ಮೆ ಬೆಳೆಯುತ್ತಿದ್ದು, ರೇಷ್ಮೆ ಕೃಷಿಗೆ ಯಾವ ಯಾವ ಉತ್ತೇಜನ ನೀಡಲಾಗಿದೆ ? (ಕಳೆದ ೩ ವರ್ಷಗಳ ವಿವರ ನೀಡವುದು)

## ಶಿವಮೊಗ್ಗ ಜಿಲ್ಲೆಯಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿರುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೮ (೧೭೨) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ಪರವಾನಿಗೆ ಪಡೆಯದೇ ಗಣಿಗಾರಿಕೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯದಲ್ಲಿ ಅಕ್ರಮವಾಗಿ ಗಣಿಗಾರಿಕೆ ನಡೆಸುತ್ತಿರುವವರ ವಿರುದ್ಧ ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ;

(ಇ) ಅಕ್ರಮವಾಗಿ ಗಣಿಗಾರಿಕೆ ನಡೆಸುತ್ತಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗಿದೆಯೇ; ನಷ್ಟ ಉಂಟಾಗಿದ್ದಲ್ಲಿ ಎಷ್ಟು ಹಣ ನಷ್ಟವಾಗಿರುತ್ತದೆ;

(ಈ) ಮರಳು ಮತ್ತು ಗಣಿಗಾರಿಕೆಗೆ ಅನುಮತಿ ಪಡೆಯಲು ಸರ್ಕಾರದ ಮಾನದಂಡಗಳೇನು ? (ಪ್ರತ್ಯೇಕವಾಗಿ ವಿವರ ನೀಡುವುದು)

## ತೋಟಗಾರಿಕೆ ಬೆಳೆಗಳ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೯ (೧೭೩) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ, ಚನ್ನಗಿರಿ ತಾಲ್ಲೂಕಿನಲ್ಲಿ ಎಷ್ಟು ಹೆಕ್ಟೇರ್ ತೋಟಗಾರಿಕೆ ಪ್ರದೇಶ ಇದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ತೋಟಗಾರಿಕೆ ಬೆಳೆಗಳಿಂದ ರೈತರಿಗೆ ಅನುಕೂಲವಾಗುವಂತಹ ಬೆಳೆಗಳಿಗೆ ಸರ್ಕಾರ ಬೆಂಬಲ ಬೆಲೆ ನಿಗಧಿಪಡಿಸಿದೆಯೇ; (ಸಂಪೂರ್ಣ ವಿವರ ನೀಡುವುದು)

(ಇ) ತೋಟಗಾರಿಕೆ ಬೆಳೆಗಳನ್ನು ಬೇಡಿಕೆ / ಪೂರೈಕೆಗೆ ತಕ್ಕಂತೆ ರಫ್ತು ಹಾಗೂ ಆಮದು ಮಾಡುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಕರ್ನಾಟಕ ರಾಜ್ಯದಲ್ಲಿ ತೋಟಗಾರಿಕೆ ಬೆಳೆಗಳಿಗೆ ಸರ್ಕಾರ ನೀಡುತ್ತಿರುವ ಸವಲತ್ತುಗಳು ಯಾವುವು ?

## ಕೈಗಾರಿಕೆ ಕ್ಷೇತ್ರ ಪುನಃಶ್ಚೇತನಗೊಳಿಸುವ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೦ (೧೭೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್–೧೯ ಲಾಕ್‌ಡೌನ್ ಪರಿಣಾಮಕಾರಿ ತೀವ್ರ ಆರ್ಥಿಕ ಸಂಕಷ್ಟಕ್ಕೀಡಾಗಿರುವ ಕ್ಷೇತ್ರವನ್ನು ಪುನಃ ಶ್ಚೇತನಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ರಾಜ್ಯ ಸರ್ಕಾರದಿಂದ ಕೈಗಾರಿಕಾ ಕ್ಷೇತ್ರದ ಆರ್ಥಿಕ ಪುನಃಶ್ಚೇತನಕ್ಕೆ ನೀಡಲಾಗಿರುವ ಹಣಕಾಸಿನ ಸಹಾಯಧನ ಮೊತ್ತವೆಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಸಹಕಾರಿ ಬ್ಯಾಂಕ್‌ಗಳ ಪುನಃಶ್ಚೇತನ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೧ (೧೭೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಸಹಕಾರಿ ಅಧಿನಿಯಮದಡಿ ಒಟ್ಟು ಎಷ್ಟು ಸಹಕಾರಿ ಬ್ಯಾಂಕ್‌ಗಳು ನೋಂದಾಯಿತವಾಗಿವೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇಲ್ಲಿಯವರೆಗೆ ನೋಂದಾವಣಿಯಾದ ಬ್ಯಾಂಕ್‌ಗಳು ಎಷ್ಟು ಸಹಕಾರಿ ಬ್ಯಾಂಕ್‌ಗಳು ಕಾರ್ಯನಿರ್ವಹಿಸುತ್ತಿವೆ;

(ಇ) ನೋಂದಾಯಿತ ಬ್ಯಾಂಕ್‌ಗಳಲ್ಲಿ ಎಷ್ಟು ಬ್ಯಾಂಕ್‌ಗಳು ನಷ್ಟದಲ್ಲಿವೆ; ಮತ್ತು ಅವುಗಳ ಪುನಃಶ್ಚೇತನಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ಸಹಕಾರಿ ಬ್ಯಾಂಕ್‌ಗಳಲ್ಲಿ ಇತ್ತೀಚೆಗೆ ಅವ್ಯವಹಾರಗಳು ಹೆಚ್ಚಾಗಿದ್ದು, ಠೇವಣಿದಾರರು ಆತಂಕದಲ್ಲಿದ್ದು ಅದರ ರಕ್ಷಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಅಡುಗೆ ಎಣ್ಣೆ ಘಟಕಗಳ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೨ (೧೭೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಡುಗೆಗೆ ಬಳಸುವ ಅಡುಗೆ ಎಣ್ಣೆ ತಯಾರಿಸುವ ಘಟಕಗಳೆಷ್ಟು; ಕೆಲವು ಘಟಕಗಳಲ್ಲಿ ತಯಾರಿಸುತ್ತಿರುವ ಎಣ್ಣೆಯಲ್ಲಿ ಮಿಕ್ಸಿಂಗ್ ಇರುವುದನ್ನು ವಾಹಿನಿಗಳು ಸಮಗ್ರವಾಗಿ ಚಿತ್ತರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸರ್ಕಾರ ಎಲ್ಲಾ ತಯಾರಿಕ ಸಂಸ್ಥೆಗೆ ಪರವಾನಗೆಯನ್ನು ನೀಡಿದೆಯೇ; ಸರ್ಕಾರ ಎಲ್ಲಾ ತಯಾರಿಕಾ ಸಂಸ್ಥೆಗೆ ಆಕಸ್ಮಿಕವಾಗಿ ಭೇಟಿ ನೀಡಿ ಪರಿಶೀಲಿಸಿದೆಯೇ; ೨೦೨೦ ವರ್ಷದಲ್ಲಿ ಎಷ್ಟು ಸಂಸ್ಥೆಗಳನ್ನು ಪರಿಶೀಲಿಸಲಾಗಿದೆ; ಯಾವ ಸಂಸ್ಥೆಯವರ ಮೇಲೆ ಇದುವರೆಗೆ ಯಾವ ಕ್ರಮ ಜರುಗಿಸಲಾಗಿದೆ; ಈ ಕಲಬೆರೆಕೆ ದಂಥೆ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಪರವಾನಗೆ ನೀಡಿದ ಘಟಕಗಳಲ್ಲಿ ಕಲಬೆರೆಕೆ ಅಡುಗೆ ಎಣ್ಣೆ ತಯಾರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಆಹಾರ ಇಲಾಖೆಯವರು ಶಿವಮೊಗ್ಗ ನಗರದಲ್ಲಿ ಎಷ್ಟು ಅಂಗಡಿಗಳಿಗೆ ಹಾಗೂ ಹೋಟೆಲ್‌ಗಳಿಗೆ ಭೇಟಿ ನೀಡಿ ಅಡುಗೆಗೆ ಬಳಸುವ ಎಣ್ಣೆಗಳನ್ನು ಪರೀಕ್ಷೆಗೆ ಒಳಪಡಿಸಿದ್ದಾರೆ; ಇದರಿಂದ ಕಂಡುಬಂದ ಅಂಶಗಳೇನು ?

## KIADB / KSSIDC ವತಿಯಿಂದ ಹಿಂದುಳಿದ ವರ್ಗಗಳಿಗೆ ಫ್ಲಾಟ್‌ಗಳನ್ನು ಒದಗಿಸುವ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು ):–**

೨೧೩ (೨೨೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳಿಗೆ ಕೆ.ಐ.ಎ.ಡಿ.ಬಿ. ಮತ್ತು ಕೆ.ಎಸ್.ಎಸ್.ಟಿ.ಡಿ.ಸಿ ಯಿಂದ ಹಂಚಿಕೆ ಮಾಡಲಾಗುವ ಫ್ಲಾಟ್‌ಗಳಿಗೆ ಸಬ್ಸಿಡಿ ನೀಡುವ ಕಾರ್ಯಕ್ರಮಕ್ಕೆ ಆದೇಶ ಹೊರಡಿಸಿರುವುದು ಯಾವಾಗ; (ಮಾಹಿತಿ ನೀಡುವುದು)

(ಆ) ಹಿಂದುಳಿದ ವರ್ಗಗಳಿಗೆ ಶೇಕಡ ಎಷ್ಟು ಸಬ್ಸಿಡಿಯನ್ನು ಈ ಫ್ಲಾಟ್‌ಗಳಿಗೆ ನೀಡುವ ಅವಕಾಶವನ್ನು ಕಲ್ಪಿಸಲಾಗಿದೆ;

(ಇ) ಸರ್ಕಾರ ಆದೇಶ ಹೊರಡಿಸಿದಾಗಿನಿಂದ ಇಲ್ಲಿಯವರೆಗೆ ಜಿಲ್ಲೆಯಲ್ಲಿ ಎಷ್ಟು ಹಿಂದುಳಿದ ವರ್ಗಗಳ ಫಲಾನುಭವಿಗಳು ಈ ಪ್ರಯೋಜನೆಯನ್ನು ಪಡೆದಿರುತ್ತಾರೆ; ಎಷ್ಟು ಸಬ್ಸಿಡಿಯನ್ನು ನೀಡಲಾಗಿದೆ ? (ವರ್ಗವಾರು, ಫಲಾನುಭವಿಗಳವಾರು ಸಂಪೂರ್ಣ ಮಾಹಿತಿ ನೀಡುವುದು)

## ಗಣಿ ಕೈಗಾರಿಕೆಗಳ ಅನುಮತಿ ಅವಧಿಯ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು ):–**

೨೧೪ (೨೨೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಗಳಲ್ಲಿ ಎಷ್ಟು ಗಣಿ ಕೈಗಾರಿಕೆಗಳಿಗೆ ಅನುಮತಿ ನೀಡಲಾಗಿದೆ ಹಾಗೂ ಯಾವ ಅವಧಿಯವರೆಗೆ ಅನುಮತಿ ನೀಡಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಗಣಿ ಕೈಗಾರಿಕೆಗಳಲ್ಲಿ ಪ್ರಸ್ತುತ ಎಷ್ಟು ಕೈಗಾರಿಕೆಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ ಎಷ್ಟು ಸ್ಥಗಿತಗೊಂಡಿರುತ್ತವೆ; ಸ್ಥಗಿತಗೊಂಡಿರುವುದಕ್ಕೆ ಕಾರಣಗಳೇನು;

(ಇ) ಹೊಸದಾಗಿ ಪ್ರಾರಂಭಿಸುವ ಗಣಿ ಕೈಗಾರಿಕೆಗಳಿಗೆ ಯಾವ ಮಾನದಂಡಗಳನ್ವಯ ಅನುಮತಿ ನೀಡಲಾಗುವುದು ಮತ್ತು ಅವುಗಳಿಗೆ ವಿಧಿಸುವ ಷರತ್ತುಗಳೇನು ? (ಅಗತ್ಯ ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

## ತುಮಕೂರು ಜಿಲ್ಲೆಯ ಗಣಿ ಬಾಧಿತ ಪ್ರದೇಶದ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೧೫ (೨೦೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆಯ ಗಣಿ ಬಾಧಿತ ಪ್ರದೇಶದ ಪುನರುಜೀವನಕ್ಕೆ ಮೀಸಲಿಟ್ಟಿರುವ ಅನುದಾನ ಎಷ್ಟು (ಮಾಹಿತಿ ನೀಡುವುದು)

(ಆ) ತುಮಕೂರು ಜಿಲ್ಲೆಯ ಗಣಿ ಬಾಧಿತ ಪ್ರದೇಶದ ಪುನರ್ ಅಭಿವೃದ್ಧಿಗೆ ಮೀಸಲಿಟ್ಟ ಹಣವೆಷ್ಟು ;

(ಇ) ಎಷ್ಟು ವರ್ಷಗಳಿಂದ ಈ ಹಣವನ್ನು ಮೀಸಲಿಡಲಾಗಿದೆ ಮತ್ತು ಗ್ರಾಮವಾರು ಅಭಿವೃದ್ಧಿಗೆ ಎಷ್ಟು ಹಣ ಮೀಸಲಿಡಲಾಗಿದೆ;

(ಈ) ಈ ವಿಶೇಷ ನಿಧಿಯ ಸದ್ಬಳಕೆಗೆ ಯಾವ ಕಾರ್ಯಕ್ರಮ ರೂಪಿಸಲಾಗಿದೆ? (ಸಂಪೂರ್ಣ ವಿವರ ನೀಡುವುದು)

## ತೋಟಗಾರಿಕಾ ಬೆಳೆಗಳ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೬ (೨೦೪) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ತೋಟಗಾರಿಕಾ ಬೆಳೆಗಳ ಅಭಿವೃದ್ಧಿಗೆ ಮಂಜೂರು ಮಾಡಲಾದ ಒಟ್ಟು ಅನುದಾನವೆಷ್ಟು ; ಖರ್ಚಾದ ಹಣವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ತುಮಕೂರು ಜಿಲ್ಲೆಯಲ್ಲಿ ತೆಂಗಿನ ಬೆಳೆ ನಾಶವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ತೆಂಗು ಬೆಳೆಯ ಸಮಗ್ರ ಅಭಿವೃದ್ಧಿಗೆ ಸರ್ಕಾರ ಯಾವ ಯಾವ ಹೊಸ ಯೋಜನೆಗಳನ್ನು ರೂಪಿಸಿದೆ ;

(ಇ) ತುಮಕೂರು ಜಿಲ್ಲೆಯ ತೆಂಗು ಅಭಿವೃದ್ಧಿಗಾಗಿ ಕಳೆದೆರಡು ವರ್ಷಗಳಿಂದ ನೀಡಲಾದ ಅನುದಾನವೆಷ್ಟು ; ಖರ್ಚಾದ ಹಣವೆಷ್ಟು ; (ಮಾಹಿತಿ ನೀಡುವುದು)

(ಈ) ತುಮಕೂರು ಜಿಲ್ಲೆ, ಚಿಕ್ಕನಾಯಕನಹಳ್ಳಿ ಬೆಳ್ಳಾರದಲ್ಲಿ ತೋಟಗಾರಿಕೆ ಇಲಾಖೆಯ ಎಷ್ಟು ಭೂಪ್ರದೇಶವಿದೆ ; ಅಲ್ಲಿ ಯಾವ ತೋಟಗಾರಿಕೆ ಚಟುವಟಿಕೆ ನಡೆಯುತ್ತಿದೆ ? (ಮಾಹಿತಿ ನೀಡುವುದು)

## ಕೋ–ಆಪರೇಟಿವ್ ಬ್ಯಾಂಕಿನ ಸ್ಥಿರತೆಯ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೨೧೭ (೧೯೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿನ ಶ್ರೀ ಗುರು ರಾಘವೇಂದ್ರ ಕೋ–ಆಪರೇಟಿವ್ ಬ್ಯಾಂಕ್‌ನಲ್ಲಿ ಇತ್ತೀಚೆಗೆ ನಡೆದ ಹಗರಣ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಹಗರಣದ ಸಂಕ್ಷಿಪ್ತ ಮಾಹಿತಿ ನೀಡುವುದು ;

(ಆ) ಈ ಬ್ಯಾಂಕ್‌ನಲ್ಲಿ ಖಾತೆ ಹೊಂದಿರುವ ಎಷ್ಟು ಗ್ರಾಹಕರಿಗೆ ತೊಂದರೆ ಆಗಿದೆ ; (ಮಾಹಿತಿ ನೀಡುವುದು)

(ಇ) ಇಂತಹ ಬ್ಯಾಂಕ್ ಹಗರಣಗಳನ್ನು ತಪ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಈ) ಸಹಕಾರ ಬ್ಯಾಂಕ್‌ಗಳ ನಿಯಂತ್ರಣದಲ್ಲಿ ಆರ್.ಬಿ.ಐ. ಮತ್ತು ರಾಜ್ಯ ಸರ್ಕಾರದ ಸಹಕಾರ ಇಲಾಖೆಯಲ್ಲಿನ ದ್ವಿನೀತಿಯ ನಿಯಮಗಳಿಂದ ತೊಂದರೆಯಾಗುತ್ತಿರುವ ವಿಷಯದ ಬಗ್ಗೆ ಸರ್ಕಾರದ ನಿಲುವೇನು ? (ಸ್ಪಷ್ಟ ಮಾಹಿತಿ ನೀಡುವುದು)

## ಹೊಸ ಬಡಾವಣೆ ಮತ್ತು ಅಪಾರ್ಟ್‌ಮೆಂಟ್‌ಗಳಿಗೆ ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೨೧೮ (೧೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರ ಹಾಗೂ ಪಟ್ಟಣ ಪ್ರದೇಶಗಳಲ್ಲಿ ನಿರ್ಮಾಣಗೊಂಡಿರುವ ಹಾಗೂ ನಿರ್ಮಾಣ ಹಂತದಲ್ಲಿರುವ ಹಲವು ಹೊಸ ಬಡಾವಣೆಗಳು ಮತ್ತು ಅಪಾರ್ಟ್‌ಮೆಂಟ್‌ಗಳಿಗೆ ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಇರುವ ಮಾನದಂಡಗಳೇನು ; (ವಿವರ ನೀಡುವುದು)

(ಆ) ಈ ಹೊಸ ಬಡಾವಣೆಗಳು ಮತ್ತು ಅಪಾರ್ಟ್‌ಮೆಂಟ್‌ಗಳ ಗೃಹ ತ್ಯಾಜ್ಯ ನೀರು ಸಂಸ್ಕರಣೆಯಾಗದೆ ಸಮೀಪದ ಬಯಲು ಮತ್ತು ಹಳ್ಳ ಪ್ರದೇಶಗಳಿಗೆ ಸೇರುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ಅನೇಕ ಪ್ರದೇಶಗಳಲ್ಲಿ ಈ ಮಲಿನ ಗೃಹ ತ್ಯಾಜ್ಯ ನೀರು ಸಂಸ್ಕರಣೆಯಾಗದೆ ಅಂತರ್ಜಲಕ್ಕೆ ಸೇರಿ ಸಮೀಪದ ಕುಡಿಯುವ ನೀರಿನ ಮೂಲವನ್ನು ಕಲುಷಿತಗೊಳಿಸುವ ಸಂಭವವಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಕುಡಿಯುವ ನೀರಿನ ಮೇಲೆ ಅವಲಂಬಿತ ಕುಟುಂಬಗಳ ಪರಿಸ್ಥಿತಿಯ ಬಗ್ಗೆ ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಅಕ್ರಮ ಗಣಿಗಾರಿಕೆ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-**

೨೧೯ (೨೦೦) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಅಕ್ರಮ ಗಣಿಗಾರಿಕೆ ಬಗ್ಗೆ Comptroller and Auditor General (CAG) ವರದಿಯಲ್ಲಿ ಪ್ರಸ್ತಾಪಿಸಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಇ) ಈ ಅಕ್ರಮ ಗಣಿಗಾರಿಕೆ ತಡೆಯಲು CAG ರವರು ನೀಡಿರುವ ವರದಿಯಲ್ಲಿನ ಮಾರ್ಗಸೂಚಿಗಳಂತೆ ಸರ್ಕಾರ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಈ) ಈ ಅಕ್ರಮ ಗಣಿಗಾರಿಕೆಯಿಂದ ಸರ್ಕಾರದ ಬೊಕ್ಕಸಕ್ಕೆ ಆದ ನಷ್ಟವೆಷ್ಟು ? (ಮಾಹಿತಿ ನೀಡುವುದು)

## ಸಾರ್ವಜನಿಕ ಉದ್ದಿಮೆಗಳ ಖಾಸಗೀಕರಣದ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೨೨೦ (೧೯೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಾರ್ವಜನಿಕ ಉದ್ದಿಮೆಗಳ ಇಲಾಖೆಯಡಿಯಲ್ಲಿ ಎಷ್ಟು ಉದ್ದಿಮೆಗಳಿವೆ ; ಎಷ್ಟು ಉದ್ಯೋಗಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ; (ಮಾಹಿತಿಯನ್ನು ನೀಡುವುದು)

(ಆ) ಸದರಿ ಸಾರ್ವಜನಿಕ ಉದ್ದಿಮೆಗಳಲ್ಲಿ ಯಾವುದಾದರೂ ಉದ್ದಿಮೆಯನ್ನು ಖಾಸಗೀಕರಣ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ; (ಮಾಹಿತಿ ನೀಡುವುದು)

(ಇ) ಖಾಸಗೀಕರಣ ಮಾಡುವ ಉದ್ದಿಮೆಗಳ ಕಾರ್ಯನಿರತ ಉದ್ಯೋಗಿಗಳ ಭವಿಷ್ಯದ ಕುರಿತು ಸರ್ಕಾರದ ನಿಲುವೇನು ? (ಮಾಹಿತಿ ನೀಡುವುದು)

## ಸರ್ಕಾರ ಕೈಗೊಂಡಿರುವ ಬೆಳೆ ಸಮೀಕ್ಷೆಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೧ (೨೮೬) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದಿಂದ ಕೈಗೊಳ್ಳುತ್ತಿರುವ ಬೆಳೆ ಸಮೀಕ್ಷೆ ದಾಖಲೆಯನ್ನು ಸರ್ಕಾರದಿಂದ ದೊರೆಯುವ ಎಲ್ಲಾ ಸವಲತ್ತುಗಳಿಗೆ ಕಡ್ಡಾಯವಾಗಿ

ಪರಿಗಣಿಸಲಾಗುವುದೇ ; ಹಾಗಿದ್ದಲ್ಲಿ, ಇದಕ್ಕೆ ಅನುಸರಿಸುತ್ತಿರುವ ಮಾನದಂಡಗಳೇನು ;

(ಆ) ಬೆಳೆ ಸಮೀಕ್ಷೆಯಲ್ಲಿ ಉಂಟಾಗುವ ವ್ಯತ್ಯಾಸಗಳಿಗೆ ಕೈಗೊಳ್ಳಬೇಕಾದ ಪರ್ಯಾಯ ಕ್ರಮಗಳು ಯಾವುವು ;

(ಇ) ಬೆಳೆ ವಿಮೆಯ ಕಂತನ್ನು ರೈತರು ಬ್ಯಾಂಕ್‌ಗಳಲ್ಲಿ ಪಾವತಿಸಲು ಅವಕಾಶ ಕಲ್ಪಿಸಲಾಗಿದೆಯೇ ; ಇದರಿಂದ ರೈತರಿಗೆ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿವೆಯೇ ; ಬಂದಿದ್ದಲ್ಲಿ, ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಈ) ರೈತರ ಬೆಳೆ ವಿಮೆ ಕಂತನ್ನು ಪಾವತಿಸಲು ಹೋಬಳಿ ಕೇಂದ್ರಗಳಲ್ಲಿರುವ ಸಿಎಸ್‌ಸಿ ಅಂಚೆ ಕಛೇರಿ ಅಥವಾ ಭಾರತೀಯ ಜೀವ ವಿಮಾ ನಿಗಮ ಕಛೇರಿಗಳಲ್ಲಿ ಪಾವತಿಸಲು ಅವಕಾಶ ಕಲ್ಪಿಸಲು ಇರುವ ಅಡಚಣೆಗಳು ಏನು ;

(ಉ) ನೋಂದಾಯಿತ ಏಜೆಂಟ್‌ಗಳ ಮುಖಾಂತರ ಪಾವತಿಸಲು ಅವಕಾಶವಿದೆಯೇ ; ಇಲ್ಲವಾದಲ್ಲಿ ಯಾವ ಕಾರಣಕ್ಕೆ ನೀಡಿರುವುದಿಲ್ಲ ; ಇದರಿಂದ ಸರ್ಕಾರಕ್ಕೆ ಆಗುವ ತೊಂದರೆ ಏನು ?

## ಮರುಳು ಕೇಂದ್ರಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೨ (೨೮೭) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಮರಳು ಕೇಂದ್ರಗಳನ್ನು ತೆರೆಯಲಾಗಿದೆ ;

(ಆ) ೨೦೧೯–೨೦ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಮರಳು ಸಾಗಾಣಿಕೆ ಮಾಡಲಾಗಿದೆ ;

(ಇ) ಈ ಮರಳು ಕೇಂದ್ರಗಳಿಂದ ಆಯಾ ಜಿಲ್ಲೆಗಳ ಸರ್ಕಾರಿ ಕಾಮಗಾರಿಗಳಿಗೆ ಎಷ್ಟು ಮರಳನ್ನು ಬಳಸಲಾಗಿದೆ ;

(ಈ) ೨೦೧೯-೨೦ನೇ ಸಾಲಿನಲ್ಲಿ ಎಷ್ಟು ರಾಜಧನ ಸಂಗ್ರಹಿಸಲಾಗಿದೆ ? (ವಿವರಗಳನ್ನು ಒದಗಿಸುವುದು)

## ಮಾವು ಅಭಿವೃದ್ಧಿ ಮಂಡಳಿಯ ಯೋಜನೆಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೨೩ (೨೮೮) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಾವು ಅಭಿವೃದ್ಧಿ ಮಂಡಳಿಯ ಸ್ಥಾಪನೆಯಾದಾಗಿನಿಂದ ಇಲ್ಲಿಯವರೆಗೆ ನೀಡಿದ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಮಾವು ಅಭಿವೃದ್ಧಿ ಮಂಡಳಿಗೆ ನೀಡಲಾಗಿರುವ ಅನುದಾನ ಎಷ್ಟು ;

(ಇ) ರಾಮನಗರ ಜಿಲ್ಲೆಯಲ್ಲಿ ಮಾವು ಅಭಿವೃದ್ಧಿ ಮಂಡಳಿ ವತಿಯಿಂದ ಸ್ಥಾಪಿಸಲು ಉದ್ದೇಶಿಸಿರುವ ಮಾವು ಸಂಸ್ಕರಣಾ ಘಟಕ ಯಾವ ಹಂತದಲ್ಲಿದೆ ; ಇದಕ್ಕೆ ನಿಗದಿಪಡಿಸಿದ ಅನುದಾನ ಎಷ್ಟು; ಮಂಜೂರಾದ ಅನುದಾನ ಎಷ್ಟು ?

## ಸ್ಥಳೀಯ ಸಂಸ್ಥೆಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೨೪ (೨೮೯) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆದು ಜನಪ್ರತಿನಿಧಿಗಳ ಆಡಳಿತವಿಲ್ಲದೆ ಇರುವ ಸ್ಥಳೀಯ ಸಂಸ್ಥೆಗಳ ಅವಧಿ ಮತ್ತು ವಿವರವನ್ನು ನೀಡುವುದು ;

(ಆ) ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ/ಉಪಾಧ್ಯಕ್ಷರ ಮೀಸಲು ನಿಗದಿ ಪಡಿಸಲು ವಿಳಂಬವಾಗಿರುವುದಕ್ಕೆ ಕಾರಣಗಳೇನು ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ತೋಟಗಾರಿಕೆ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೫ (೨೯೦) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತೋಟಗಾರಿಕೆ ಅಭಿವೃದ್ಧಿಗಾಗಿ ಅನುಷ್ಠಾನಗೊಳ್ಳುತ್ತಿರುವ ಕೇಂದ್ರ/ರಾಜ್ಯ ಸರ್ಕಾರದ ಯೋಜನೆಗಳು ಯಾವುವು ; ಸದರಿ ಯೋಜನೆಗಳಲ್ಲಿ ಎಸ್‌ಸಿಪಿ/ಟಿಎಸ್‌ಪಿ ಯಿಂದ ರೈತರಿಗೆ ನೀಡುವ ಸಹಾಯಧನ ಶೇಕಡ ಪ್ರಮಾಣ ಎಷ್ಟು ;

(ಆ) ೨೦೨೦–೨೧ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಯೋಜನೆಗಳಿಗೆ ರಾಜ್ಯ ಸರ್ಕಾರದಿಂದ ಎಸ್‌ಸಿಪಿ/ಟಿಎಸ್‌ಪಿ ಯಡಿ ರೈತರಿಗೆ ಹೊಂದಾಣಿಕೆ ಮೊತ್ತವನ್ನು ನೀಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಎಷ್ಟು ಮೊತ್ತ ನೀಡಲಾಗಿದೆ ;

(ಇ) ೨೦೧೯–೨೦ನೇ ಸಾಲಿನಲ್ಲಿ ತೋಟಗಾರಿಕೆ ಇಲಾಖೆಯಲ್ಲಿ ಅನುಷ್ಠಾನಗೊಳಿಸಿರುವ ಎಲ್ಲಾ ಯೋಜನೆಗಳನ್ನು ಪ್ರಸಕ್ತ ಸಾಲಿನಲ್ಲಿಯೂ ಅನುಷ್ಠಾನಗೊಳಿಸಲಾಗುತ್ತಿದೆಯೇ ;

(ಈ) ಪ್ರಸಕ್ತ ಸಾಲಿನಲ್ಲಿ ೩೦ ಹೆಚ್.ಪಿ. ಟ್ರ್ಯಾಕ್ಟರ್‌ಗಳಿಗೆ ಸಹಾಯಧನ ನೀಡಲಾಗುತ್ತಿದೆಯೇ ; ಹಾಗಿದ್ದರೆ, ಸಹಾಯಧನದ ಮೊತ್ತ ಎಷ್ಟು ; ಇಲ್ಲವಾದಲ್ಲಿ, ಯಾವ ಕಾರಣಕ್ಕೆ ನೀಡಲಾಗುತ್ತಿಲ್ಲ ?

## ಮಂಡ್ಯದ (ಕೆರೆಅಂಗಳದ) ವಿವೇಕಾನಂದ ನಗರ ಬಡಾವಣೆಯ ಅಭಿವೃದ್ಧಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೨೬ (೧೮೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ನಗರದಲ್ಲಿ ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದಿಂದ ಅಭಿವೃದ್ಧಿ ಪಡಿಸಿರುವ (ಮಂಡ್ಯ ಕೆರೆ ಅಂಗಳದ) ವಿವೇಕಾನಂದನಗರ ಬಡಾವಣೆಯನ್ನು ಯಾವಾಗ ಅಭಿವೃದ್ಧಿ ಪಡಿಸಲಾಗಿದೆ ;

(ಆ) ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ; (ವಿವರ ನೀಡುವುದು)

(ಇ) ಈ ನಿವೇಶನಗಳಿಗೆ ಸರಿಯಾದ ಮೂಲ ಸೌಲಭ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದಕ್ಕೆ ಕಾರಣವೇನು ;

(ಈ) ಈ ಬಡಾವಣೆಯ ಬಗ್ಗೆ ಸಿ.ಬಿ.ಐ. ತನಿಖೆ ನಡೆದಿದ್ದು–ಸದರಿ ತನಿಖಾ ವರದಿ ಸರ್ಕಾರಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿವರ ನೀಡುವುದು ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಸದರಿ ಬಡಾವಣೆಯ ಸಮಸ್ಯೆಯನ್ನು ಬಗೆಹರಿಸಿ ಮೂಲ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ನಗರ ಸಭೆಗಳಲ್ಲಿನ ಪೌರ ಕಾರ್ಮಿಕರ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೨೭ (೧೮೭) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೌರ ಕಾರ್ಮಿಕರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಇದರಲ್ಲಿ ಖಾಯಂ ನೌಕರರು ಎಷ್ಟು ; ಗುತ್ತಿಗೆ ಮತ್ತು ಹೊರಗುತ್ತಿಗೆ ನೌಕರರೆಷ್ಟು ;

(ಇ) ಇದರಲ್ಲಿ ಗುತ್ತಿಗೆ ಹಾಗೂ ಹೊರಗುತ್ತಿಗೆ ನೌಕರರಿಗೆ ನೀಡುತ್ತಿರುವ ವೇತನ ಎಷ್ಟು ;

(ಈ) ಸಮಾನ ಕೆಲಸಕ್ಕೆ ಸಮಾನ ವೇತನ ಪಾವತಿಸಲಾಗುತ್ತಿದೆಯೇ ; ಇಲ್ಲವಾದಲ್ಲಿ, ಕಾರಣವೇನು ; (ವಿವರ ನೀಡುವುದು)

(ಉ) ಗುತ್ತಿಗೆ, ಹೊರಗುತ್ತಿಗೆ ನೌಕರರನ್ನು ಖಾಯಂ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಮಂಡ್ಯ ನಗರದಲ್ಲಿನ ಉದ್ಯಾನವನಗಳ ಅಭಿವೃದ್ಧಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೨೮ (೧೮೫) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ನಗರಸಭೆ ವ್ಯಾಪ್ತಿಯಲ್ಲಿರುವ ಒಟ್ಟು ಉದ್ಯಾನವನಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಸದರಿ ಉದ್ಯಾನವನಗಳ ನಿರ್ವಹಣೆಗೆ ನಗರಸಭೆ ಕೈಗೊಂಡ ಅಗತ್ಯ ಕ್ರಮಗಳೇನು ;

(ಇ) ಉದ್ಯಾನವನಗಳ ನಿರ್ವಹಣೆಯನ್ನು ನಗರ ಸಭೆಯೇ ನಿರ್ವಹಿಸುತ್ತಿದೆಯೇ ; ಅಥವಾ ಹೊರಗುತ್ತಿಗೆ ನೀಡಲಾಗಿದೆಯೇ ;

(ಈ) ಈ ಉದ್ಯಾನವನಗಳ ಅಭಿವೃದ್ಧಿಗೆ ಅನುದಾನವನ್ನು ನೀಡಲಾಗಿದೆಯೇ ; (ವಿವರ ನೀಡುವುದು)

(ಉ) ಈ ಉದ್ಯಾನವನಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಂಡ್ಯ ನಗರದಲ್ಲಿನ ತ್ಯಾಜ್ಯ ವಿಲೇವಾರಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೨೯ (೧೮೬) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ನಗರಸಭೆ ವ್ಯಾಪ್ತಿಯಲ್ಲಿ ಬರುವ ವಾರ್ಡ್‌ಗಳಲ್ಲಿ ತ್ಯಾಜ್ಯ ವಿಲೇವಾರಿ ಸಮರ್ಪಕವಾಗಿ ನಡೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ತ್ಯಾಜ್ಯ ವಿಲೇವಾರಿ ನಿರ್ವಹಣೆಗಾಗಿ ಅನುಮೋದನೆಗೊಂಡ ಹುದ್ದೆಗಳೆಷ್ಟು ; ಇದರಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ; (ವಿವರ ನೀಡುವುದು)

(ಇ) ಈ ಖಾಲಿಯಿರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ;

(ಈ) ಒಣ ತ್ಯಾಜ್ಯ ಮತ್ತು ದ್ರವ ತ್ಯಾಜ್ಯಗಳನ್ನು ವಿಂಗಡಿಸಿ ಮಂಡ್ಯ ನಗರದಲ್ಲಿ ವೈಜ್ಞಾನಿಕವಾಗಿ ಮತ್ತು ಸಮರ್ಪಕವಾಗಿ ತ್ಯಾಜ್ಯ ವಿಲೇವಾರಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಮೈಸೂರು ನಗರದ ಉದ್ಯಾನವನಗಳ ಅಭಿವೃದ್ಧಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೩೦ (೧೮೪೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಒಟ್ಟು ಉದ್ಯಾನವನಗಳೆಷ್ಟು ; (ವಿವರ ನೀಡುವುದು)

(ಆ) ಸದರಿ ಉದ್ಯಾನವನಗಳ ನಿರ್ವಹಣೆಗೆ ಪಾಲಿಕೆ ಕೈಗೊಂಡ ಕ್ರಮಗಳೇನು ;

(ಇ) ಉದ್ಯಾನವನಗಳ ನಿರ್ವಹಣೆಯನ್ನು ಪಾಲಿಕೆ ನಿರ್ವಹಿಸುತ್ತಿದೆಯೇ ; ಅಥವಾ ಹೊರಗುತ್ತಿಗೆ ನೀಡಲಾಗಿದೆಯೇ ; (ವಿವರ ನೀಡುವುದು)

(ಈ) ಈ ಉದ್ಯಾನವನಗಳ ಅಭಿವೃದ್ಧಿಗೆ ಅನುದಾನವನ್ನು ನೀಡಲಾಗಿದೆಯೇ ; (ವಿವರ ನೀಡುವುದು)

(ಉ) ಸದರಿ ಉದ್ಯಾನವನಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಅಗತ್ಯ ಕ್ರಮಗಳೇನು ?

## ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಕಾರ್ಡ್‌ಗಳನ್ನು ವಿವಿಧ ಆಶ್ರಮಗಳಿಗೆ ನೀಡುವ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೧ (೨೪೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನಾಥಾಶ್ರಮ/ವೃದ್ಧಾಶ್ರಮ/ವಿಕಲಚೇತನ ಸಂಸ್ಥೆಗಳಿಗೆ ಆಹಾರ ಇಲಾಖೆ ಬಿ.ಪಿ.ಎಲ್ ದರದಲ್ಲಿ ಆಹಾರ ಧಾನ್ಯ ನೀಡಲು ಇರುವ ಮಾನದಂಡಗಳೇನು ;

(ಆ) ರಾಜ್ಯದಲ್ಲಿ ಬಿ.ಪಿ.ಎಲ್ ಕಾರ್ಡುದಾರರಿಗೆ ವಿತರಿಸುವ ರೀತಿಯಲ್ಲಿ ಕುಟುಂಬ ಆಧಾರಿತ ಪ್ಯಾಕೇಜಿನಂತೆ ಇವರಿಗೂ ವಿತರಿಸಲು ಇರುವ ತೊಂದರೆ ಏನು ;

(ಇ) ಬಿ.ಪಿ.ಎಲ್ ಗಿಂತ ಬಡವರಾದ ಇವರಿಗೆ ರಾಜ್ಯದ ಬಿ.ಪಿ.ಎಲ್ ಯೋಜನೆ ಜಾರಿಗೆ ಬರುವಂತೆ ಸರ್ಕಾರ ಕೂಡಲೇ ಆದೇಶ ಮಾಡಲಾಗುವುದೇ ?

## ರಾಜ್ಯದ ಗಣಿ ಉದ್ಯಮದಲ್ಲಿ ನಿರತರಾಗಿರುವ ಕಾರ್ಮಿಕರ ಹಿತಾಸಕ್ತಿಯ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೨ (೨೪೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗಣಿ ಉದ್ಯಮಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರ ಹಿತದೃಷ್ಠಿಯನ್ನು ಗಮನದಲ್ಲಿಟ್ಟುಕೊಂಡು ಅವರುಗಳು ಕೆಲಸವನ್ನು ನಿರ್ವಹಿಸುವ ಸ್ಥಳಗಳಲ್ಲಿ ಕೈಗೊಂಡಿರುವ ಸುರಕ್ಷಾ ಕ್ರಮಗಳೇನು; ಈ ಸುರಕ್ಷಾ ಕ್ರಮಗಳು ರಾಷ್ಟ್ರೀಯ ಸುರಕ್ಷಾ ನಿಯಮಗಳಿಗೆ ಅನುಸಾರವಾಗಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಆ) ಗಣಿಗಾರಿಕೆಯಲ್ಲಿ ಉಪಯೋಗಿಸುತ್ತಿರುವ ಯಂತ್ರೋಪಕರಣಗಳು ಹಳೆಯದಾಗಿದ್ದು, ಹೊಸ ತಂತ್ರಜ್ಞಾನ, ತಂತ್ರಾಂಶಗಳನ್ನು ಬಳಸಿ ಹೊಸ ಯಂತ್ರೋಪಕರಣಗಳನ್ನು ಅಳವಡಿಸಲು ಸರ್ಕಾರದ ಕ್ರಮಗಳೇನು ? (ಈ ಬಗ್ಗೆ ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿರುವ ನ್ಯಾಯಬೆಲೆ ಅಂಗಡಿಗಳ ಕಾರ್ಯನಿರ್ವಹಣೆ ಬಗ್ಗೆ

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೩೩ (೨೬೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು; ಅದರಲ್ಲಿ ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ನ್ಯಾಯಬೆಲೆ ಅಂಗಡಿ ಮುಖಾಂತರ ಪಡಿತದಾರರಿಗೆ ವಿತರಿಸಲಾಗುತ್ತಿರುವ ಆಹಾರ ಧಾನ್ಯಗಳು ಯಾವುವು ; ಹಾಗೂ ಇತರೆ ಯಾವ ವಸ್ತುಗಳನ್ನು ಪಡಿತದಾರರಿಗೆ ವಿತರಿಸಲಾಗುತ್ತಿದೆ; (ಜಿಲ್ಲಾವಾರು ಧಾನ್ಯವಾರು, ವಿತರಿಸುವ ವಸ್ತುವಾರು ಸಂಪೂರ್ಣ ವಿವರ ನೀಡುವುದು)

(ಇ) ಕೆಲವು ಜಿಲ್ಲೆಗಳಲ್ಲಿ ಕೆಲವು ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರಿಗೆ ಸರಿಯಾಗಿ ಮಾಪನ ಮಾಡದೇ ಆಹಾರ ಧಾನ್ಯ ವಿತರಿಸುವುದು ಮತ್ತು ಕಳಪೆ ಮಟ್ಟದ ಆಹಾರ ಧಾನ್ಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಯಾವ ಜಿಲ್ಲೆಯಲ್ಲಿ ಬಂದಿದೆ ; ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಆಯವ್ಯಯದಲ್ಲಿ ಘೋಷಿಸಿರುವಂತೆ ಕೈಗಾರಿಕಾ ಪ್ರದೇಶದ ಅಭಿವೃದ್ಧಿ ಬಗ್ಗೆ

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೩೪ (೨೬೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೨೦-೨೧ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ತುಮಕೂರಿನ ವಸಂತ ನರಸಾಪುರ ಕೈಗಾರಿಕಾ ಪ್ರದೇಶದ ೫೪೦ ಎಕರೆ ವಿಸ್ತೀರ್ಣದ ಭೂಮಿಯಲ್ಲಿ ಮೆಷಿನ್ ಟೂಲ್ ಪಾರ್ಕ್‌ನ್ನು ೪೨೫ ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲಾಗಿದೆಯೇ ;

(ಆ) ಮೆಷಿನ್ ಟೂಲ್ ಪಾರ್ಕ್ ಸ್ಥಾಪಿತವಾಗಿದ್ದಲ್ಲಿ, ಎಷ್ಟು ಜನ ನಿರುದ್ಯೋಗಿಗಳಿಗೆ ಅವಕಾಶ ಕಲ್ಪಿಸಲಾಗಿದೆ ; ಅದರಲ್ಲಿ ರಾಜ್ಯದ ಎಷ್ಟು ಜನ ನಿರುದ್ಯೋಗಿಗಳಿಗೆ ಅವಕಾಶ ಕಲ್ಪಿಸಲಾಗಿದೆ ;

(ಇ) ಇದಕ್ಕೆ ಪ್ರಸ್ತುತ ತಗುಲಿರುವ ಒಟ್ಟು ಮೊತ್ತವೆಷ್ಟು ;

(ಈ) ಈ ಕಾಮಗಾರಿ ಪ್ರಕ್ರಿಯೆ ಟೆಂಡರ್ ನಿಯಮಾನುಸಾರ ನಡೆದಿದೆಯೇ? (ಈ ಬಗ್ಗೆ ಸಂಪೂರ್ಣ ವರದಿ ನೀಡುವುದು)

## ಕಳೆದ ೩ ವರ್ಷಗಳಿಂದ ತೋಟಗಾರಿಕಾ ಬೆಳೆಗಳ ಸ್ಥಿತಿಗತಿಗಳ ಬಗ್ಗೆ

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೩೫ (೨೬೪) ಮಾನ್ಯ ಪೌರಾಡಳಿತ ಮತ್ತು ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮-೧೯, ೨೦೧೯-೨೦ ಮತ್ತು ೨೦೨೦-೨೧ನೇ ಸಾಲಿನ ಅತಿವೃಷ್ಠಿ ಮತ್ತು ಅನಾವೃಷ್ಠಿಯಿಂದ ರಾಜ್ಯದ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ತೋಟಗಾರಿಕೆಯ ಬೆಳಗಳಾದ ಕಾಫಿ, ಟೀ, ರಬ್ಬರ್, ಮಾವು, ಸಪೋಟ, ದ್ರಾಕ್ಷಿ ಮುಂತಾದ ಬೆಳೆಗಳು ನಾಶವಾಗಿವೆ ;

(ಆ) ಇದರಿಂದ ಉಂಟಾಗಿರುವ ನಷ್ಟ ಎಷ್ಟು ; ಈ ನಷ್ಟವನ್ನು ತುಂಬಿಕೊಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಸರ್ಕಾರದಿಂದ ಎಷ್ಟು ಪರಿಹಾರವನ್ನು ನೀಡಲಾಗಿದೆ ; (ಗ್ರಾಮ ಪಂಚಾಯಿತಿವಾರು ಮಾಹಿತಿ ನೀಡುವುದು)

(ಈ) ಪರಿಹಾರ ನೀಡದಿರಲು ಕಾರಣವೇನು ?

## ರಾಜ್ಯದಲ್ಲಿ ಅಕ್ರಮ ಮರಳು ಸಾಗಾಣಿಕೆ ಬಗ್ಗೆ

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೩೬ (೭೯೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಕ್ರಮ ಮರಳು ಸಾಗಾಣಿಕೆಯಲ್ಲಿ ಇ–ವೇ ಬಿಲ್ ದುರ್ಬಳಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಅಕ್ರಮ ಮರಳು ಸಾಗಾಣಿಕೆ ಮಾಡುವವರಿಂದ ಈವರೆವಿಗೂ ಎಷ್ಟು ದಂಡ ವಸೂಲಾಗಿದೆ ; ಹಾಗೂ ಇಲ್ಲಿಯವರೆಗೂ ಎಷ್ಟು ಮೊಕದ್ದಮೆಯನ್ನು ದಾಖಲಿಸಿಕೊಳ್ಳಲಾಗಿದೆ ;

(ಇ) ಮರಳು ಸಾಗಾಣಿಕೆ ಅಕ್ರಮ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ರೈತರ ಸಾಲ ಮನ್ನಾ ವಿಷಯದಲ್ಲಿ ಜಿಲ್ಲಾ ಸಹಕಾರ ಬ್ಯಾಂಕುಗಳ ಪಾತ್ರ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೭ (೧೯೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರೈತರ ಸಾಲ ಮನ್ನಾ ವಿಷಯದಲ್ಲಿ ಜಿಲ್ಲಾ ಸಹಕಾರ ಬ್ಯಾಂಕ್‌ಗಳೊಂದಿಗೆ ಸಹಕಾರ ಇಲಾಖೆ ಯಾವ ಪಾತ್ರ ವಹಿಸುತ್ತಿದೆ;

(ಆ) ರೈತರಿಗೆ ಸಾಲ ಮನ್ನಾ ಸ್ಥಳೀಯ ಸಂಸ್ಥೆಗಳಿಗೆ ಸಾಲ ಮತ್ತಿತರ ಸರ್ಕಾರದ ಯೋಜನೆಗಳನ್ನು ಜಾರಿಗೊಳಿಸುವಲ್ಲಿ ಸರ್ಕಾರ ಎಷ್ಟರ ಮಟ್ಟಿಗೆ ಯಶಸ್ವಿಯಾಗಿದೆ ;

(ಇ) ಸಂಘ ಸಂಸ್ಥೆಗಳ ನೋಂದಣಿ ವಿಷಯದಲ್ಲಿ ಸಾರ್ವಜನಿಕರಿಗೆ ಅನ್ಯಾಯುವಾಗದಂತೆ ಸರ್ಕಾರದಿಂದ ಯಾವ ಕ್ರಮವಹಿಸಲಾಗುತ್ತಿದೆ?

## ಕೈಗಾರಿಕೆಗಳ ಪುನರಾರಂಭದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೮ (೧೯೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆ, ನೌಬಾದ್, ಕೊಳಾರ(ಕೆ), ಹುಮನಾಬಾದ್ ಮತ್ತು ಬಸವಕಲ್ಯಾಣದ ಕೈಗಾರಿಕಾ ಪ್ರದೇಶ ಹಾಗೂ ಇತರ ಪ್ರದೇಶಗಳಲ್ಲಿ ಸ್ಥಾಪಿಸಲಾಗಿರುವ ಕೈಗಾರಿಕೆಗಳು ಎಷ್ಟು ;

(ಆ) ಇವುಗಳಲ್ಲಿ ಚಾಲ್ತಿಯಲ್ಲಿರುವ ಹಾಗೂ ಮುಚ್ಚಲಾದ ಕೈಗಾರಿಕೆಗಳು ಎಷ್ಟು ; ಮುಚ್ಚಲಾದ ಕೈಗಾರಿಕೆಗಳ ಪುನರಾರಂಭಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೀದರ್ ಜಿಲ್ಲೆಯ ಕಲ್ಲು ಗಣಿಗಾರಿಕೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೯ (೩೦೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಕಲ್ಲು ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಕೆಲವು ಗಣಿಗಳಲ್ಲಿ ಬಾಲ ಕಾರ್ಮಿಕರನ್ನು ನೇಮಿಸಿಕೊಂಡು ದುಡಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಒಂದು ರಾಷ್ಟ್ರ, ಒಂದು ಪಡಿತರ ಚೀಟಿ ಯೋಜನೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೦ (೧೯೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರದ ಒಂದು ರಾಷ್ಟ್ರ ಒಂದು ಪಡಿತರ ಚೀಟಿ ಯೋಜನೆ ರಾಜ್ಯದಲ್ಲಿ ಯಾವಾಗ ಜಾರಿಗೆ ಬರಲಿದೆ ; ಇದರಿಂದ ಆಗುವ ಪ್ರಯೋಜನೆ ಏನು ;

(ಆ) ರಾಜ್ಯದಲ್ಲಿ ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆಯಿಂದ ಪಡಿತರ ಪಡೆಯುವ ಫಲಾನುಭವಿಗಳಿಗೆ ಇ–ಕೆವೈಸಿ ವ್ಯವಸ್ಥೆಯು ಇನ್ನೂ ಜಾರಿಯಲ್ಲಿದೆಯೇ ; ಹಾಗಿದ್ದಲ್ಲಿ, ಎಷ್ಟು ಫಲಾನುಭವಿಗಳು ಇ–ಕೆವೈಸಿ ಪ್ರಯೋಜನೆ ಪಡೆದಿರುತ್ತಾರೆ ;

(ಇ) ಬೀದರ್ ಜಿಲ್ಲೆಯಲ್ಲಿ ಇದುವರೆಗೂ ವಿತರಿಸಲಾದ ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ೨೦೧೯–೨೦ನೇ ಸಾಲಿನಲ್ಲಿ ಪತ್ತೆ ಹಚ್ಚಲಾದ ನಕಲಿ ಪಡಿತರ ಚೀಟಿಗಳ ಸಂಖ್ಯೆ ಎಷ್ಟು ; ಈ ಪ್ರಕರಣಗಳಲ್ಲಿ ಎಷ್ಟು ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ?

## ಕಲ್ಯಾಣ ಕರ್ನಾಟಕ ೬ ಜಿಲ್ಲೆಗಳಲ್ಲಿ ಸಹಕಾರ ಇಲಾಖೆಯ ಉಪ ನಿರ್ದೇಶಕರುಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೧ (೧೯೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲ್ಯಾಣ ಕರ್ನಾಟಕ ಭಾಗದ ೬ ಜಿಲ್ಲೆಗಳಲ್ಲಿ ಸಹಕಾರ ಇಲಾಖೆಯಲ್ಲಿ ಬರುವ ಉಪ ನಿರ್ದೇಶಕರು ಹಾಗೂ ಸಹಾಯಕ ನಿರ್ದೇಶಕರುಗಳ ಸಂಖ್ಯೆ ಎಷ್ಟು ; ಎಷ್ಟು ಹುದ್ದೆಗಳು ಖಾಲಿ ಇವೆ ; ಎಷ್ಟು ಹುದ್ದೆಗಳಿಗೆ ಪ್ರಭಾರ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಸಹಕಾರ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವಲ್ಲಿ ಸರ್ಕಾರ ವಿಳಂಬ ಮಾಡುತ್ತಿರುವುದರಿಂದ ರೈತರ ಸಹಕಾರ ಸಂಘಗಳ ಮೇಲೆ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ?

## ನಕಲಿ ಪಡಿತರ ಚೀಟಿ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೨೪೨ (೦೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಕಲಿ ಪಡಿತರ ಚೀಟಿ ರದ್ದತಿಗೆ ರಾಜ್ಯ ಸರ್ಕಾರ ಒಲವು ಹೊಂದಿದೆಯೇ ; ಹಾಗಿದ್ದಲ್ಲಿ, ನಕಲಿ ಪಡಿತರ ಚೀಟಿ ರದ್ದತಿಗೆ ರಾಜ್ಯ ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು ;

(ಆ) ಈವರೆಗೆ ಎಷ್ಟು ಬಿ.ಪಿ.ಎಲ್ ಮತ್ತು ಅಂತ್ಯೋದಯ ಕಾರ್ಡ್‌ಗಳನ್ನು ರದ್ದುಗೊಳಿಸಲಾಗಿದೆ ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಇ) ಇದಕ್ಕೆ ನಿಗದಿಪಡಿಸಿರುವ ಕಾಲಮಿತಿಯೇನು ;

(ಈ) ಬಿ.ಪಿ.ಎಲ್ ಅಥವಾ ಅಂತ್ಯೋದಯ ಕಾರ್ಡ್ ಪಡೆದು ಸರ್ಕಾರಕ್ಕೆ ನಷ್ಟ ಉಂಟುಮಾಡಿರುವ ಫಲಾನುಭವಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ?

## ವಾಣಿಜ್ಯ ಬ್ಯಾಂಕ್‌ಗಳಲ್ಲಿನ ಬೆಳೆ ಸಾಲ ಮನ್ನಾ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೨೪೩ (೧೮೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಸಮ್ಮಿಶ್ರ ಸರ್ಕಾರದ ಅವಧಿಯಲ್ಲಿ ಜಾರಿಗೆ ತರಲಾದ ವಾಣಿಜ್ಯ ಬ್ಯಾಂಕ್‌ಗಳ ಮುಖಾಂತರ ರೈತರು ಪಡೆದಿದ್ದ ಬೆಳೆ ಸಾಲ ಮನ್ನಾ ಈಗಲೂ ಚಾಲ್ತಿಯಲ್ಲಿದೆಯೇ ;

(ಆ) ವಾಣಿಜ್ಯ ಬ್ಯಾಂಕ್‌ಗಳಲ್ಲಿ ಎಷ್ಟು ರೈತರ ಬೆಳೆ ಸಾಲವನ್ನು ಮನ್ನಾ ಮಾಡಲಾಗಿದೆ ; ಅದರ ಮೊತ್ತವೆಷ್ಟು ;

(ಇ) ಮನ್ನಾ ಮಾಡಿರುವ ಮೊತ್ತವನ್ನು ಸರ್ಕಾರದಿಂದ ವಾಣಿಜ್ಯ ಬ್ಯಾಂಕ್‌ಗಳಿಗೆ ತುಂಬಲಾಗಿದೆಯೇ ;

(ಈ) ಸಾಲ ಮನ್ನಾಗೊಳ್ಳದೇ ಇರುವ ಬಗ್ಗೆ ರೈತರಿಂದ ದೂರುಗಳು ಬಂದಿವೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿನ ಬೆಳೆ ಸಾಲ ಮನ್ನಾ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೨೪೪ (೦೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಸಮ್ಮಿಶ್ರ ಸರ್ಕಾರದ ಅವಧಿಯಲ್ಲಿ ಜಾರಿಗೆ ತಂದಿರುವ ಕೃಷಿ ಪತ್ತಿನ ಸಹಕಾರ ಸಂಘಗಳ ಮುಖಾಂತರ ರೈತರು ಪಡೆದಿದ್ದ ಬೆಳೆ ಸಾಲಮನ್ನಾ ಈಗಲೂ ಚಾಲ್ತಿಯಲ್ಲಿದೆಯೇ ;

(ಆ) ಸಹಕಾರ ಸಂಘಗಳಲ್ಲಿ ಈವರೆವಿಗೆ ಎಷ್ಟು ರೈತರು ಬೆಳೆ ಸಾಲವನ್ನು ಮನ್ನಾ ಮಾಡಲಾಗಿದೆ ; ಅದರ ಮೊತ್ತವೆಷ್ಟು ; (ವಿವರ ನೀಡುವುದು)

(ಇ) ಮನ್ನಾ ಮಾಡಿರುವ ಮೊತ್ತವನ್ನು ಸರ್ಕಾರದಿಂದ ಆಯಾಯ ಸಂಘಗಳಿಗೆ ತುಂಬಲಾಗಿದೆಯೇ ;

(ಈ) ಹಾಗಿದ್ದಲ್ಲಿ, ಈವರೆವಿಗೆ ಎಷ್ಟು ಮೊತ್ತವನ್ನು ತುಂಬಲಾಗಿದೆ ?

## ಕರ್ನಾಟಕ ಆರ್ಟಿಕಲ್ಚರ್ ಫೆಡರೇಷನ್ ಸಂಸ್ಥೆಯ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೨೪೫ (೨೨) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕರ್ನಾಟಕ ಆರ್ಟಿಕಲ್ಚರ್ ಫೆಡರೇಷನ್ ಎನ್ನುವ ಸಂಸ್ಥೆ ಅಸ್ತಿತ್ವದಲ್ಲಿದೆಯೇ ; ಇದ್ದಲ್ಲಿ, ಇದರ ವ್ಯಾಪ್ತಿ ಏನು ;

(ಆ) ಹಾಗಿದ್ದಲ್ಲಿ, ಈ ಸಂಸ್ಥೆ ಎಂದಿನಿಂದ ಕಾರ್ಯನಿರ್ವಹಿಸುತ್ತಿದೆ ; ಈ ಸಂಸ್ಥೆಯ ಸ್ಥಾಪನೆಯ ಉದ್ದೇಶಗಳೇನು ; ಪ್ರಸ್ತುತ ಇದರ ಕಾರ್ಯಚಟುವಟಿಕೆಗಳೇನು ?

## ನಗರಸಭೆ ಪಾಲಿಕೆಗಳಲ್ಲಿ ಅಳವಡಿಸಲಾಗಿರುವ ನೀರಿನ ವ್ಯವಸ್ಥೆ ಕುರಿತು

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೨೪೬ (೧೭೧) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದ ವತಿಯಿಂದ ವಿವಿಧ ನಗರಸಭೆ, ಪಾಲಿಕೆಗಳಲ್ಲಿ ಅಳವಡಿಸಲಾಗಿರುವ R.o ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು ;

(ಆ) ಒಂದು ಲೀಟರ್ ಕುಡಿಯುವ ನೀರು ಪಡೆಯಲು ಘಟಕಕ್ಕೆ ಅಂದಾಜು ಎಷ್ಟು ಲೀಟರ್ Raw ನೀರು ಒದಗಿಸಬೇಕಾಗುತ್ತದೆ ; R.o ಪ್ರಕ್ರಿಯೆ ನಂತರ ಎಷ್ಟು ತ್ಯಾಜ್ಯ ನೀರು ಉತ್ಪಾದನೆಯಾಗುತ್ತದೆ.

(ಇ) ಈ ತ್ಯಾಜ್ಯ ನೀರನ್ನು ಘಟಕದಿಂದ ಯಾವ ರೀತಿ ವಿಸರ್ಜಿಸಲಾಗುತ್ತಿದೆ;

(ಈ) ಸದರಿ ತ್ಯಾಜ್ಯ ನೀರಿನಲ್ಲಿರುವ ವಿವಿಧ ರಾಸಾಯನಿಕ ವಸ್ತುಗಳ ಪ್ರಮಾಣವೆಷ್ಟು ;

(ಉ) ಸದರಿ ನೀರಿನ ಸದ್ಬಳಕೆ ಸರ್ಕಾರದ ಯೋಜನೆಗಳೇನು ?

## ಕೈಗಾರಿಕೆ ಸ್ಥಾಪಿಸಲು ಪ್ರೋತ್ಸಾಹ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೨೪೭ (೨೨೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಪ್ರೋತ್ಸಾಹಕ್ಕೆ ಯೋಜನೆ ರೂಪಿಸಲಾಗಿದೆಯೇ ; (ವಿವರ ನೀಡುವುದು)

(ಆ) ರಾಜ್ಯದ ಮತ್ತು ಕೇಂದ್ರ ಸರ್ಕಾರದಿಂದ ಕಳೆದ ೩ ವರ್ಷಗಳಲ್ಲಿ ಬಿಡುಗಡೆಯಾದ, ಬಳಸಿದ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಸ್ಥಾಪನೆಯಾದ ಕೈಗಾರಿಕೆಗಳು ಎಷ್ಟು ಹಾಗೂ ಅವುಗಳ ಮೂಲಕ ಎಷ್ಟು ಉದ್ಯೋಗ ಕಲ್ಪಿಸಲಾಗಿದೆ ; (ವಿವರ ನೀಡುವುದು)

(ಈ) ಕೈಗಾರಿಕೆ ಸ್ಥಾಪನೆಗೆ ಒದಗಿಸಲಾಗಿರುವ ಜಮೀನು ಮತ್ತು ಮೂಲಭೂತ ಸೌಕರ್ಯಗಳ ವಿವರ ನೀಡುವುದು ?

## ಜಲ್ಲಿ ಕ್ರಷರ್ ಸ್ಥಾಪನೆ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೨೪೮ (೨೨೮) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ನಡೆಯುತ್ತಿರುವ ಜಲ್ಲಿ ಕ್ರಷರ್‌ಗಳ ಸಂಖ್ಯೆ ಎಷ್ಟು ;

(ಆ) ಕಳೆದ ೩ ವರ್ಷಗಳಲ್ಲಿ ಈ ಕ್ರಷರ್‌ಗಳಿಂದ ಸರ್ಕಾರಕ್ಕೆ ಬಂದಿರುವ ಆದಾಯ ಎಷ್ಟು ;

(ಇ) ಕಳೆದ ೩ ವರ್ಷಗಳಲ್ಲಿ ಎಷ್ಟು ಅನಧಿಕೃತ ಕ್ರಷರ್‌ಗಳನ್ನು ಪತ್ತೆ ಹಚ್ಚಲಾಗಿದೆ ; ಅವುಗಳ ಮೇಲೆ ಯಾವ ಕ್ರಮ ವಹಿಸಲಾಗಿದೆ ;

(ಈ) ಹೊಸ ಕಲ್ಲು ಗಣಿ ಪರವಾನಿಗೆಗೆ ಬಂದಿರುವ ಅರ್ಜಿಗಳು ಎಷ್ಟು ; ಆ ಎಲ್ಲಾ ಅರ್ಜಿಗಳು ವಿಲೇವಾರಿ ಆಗಿವೆಯೇ ? (ವಿವರ ನೀಡುವುದು)

## ಶ್ರೀ ವಾಜಪೇಯಿ ಬಡಾವಣೆ ಅಭಿವೃದ್ಧಿ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೨೪೯ (೨೨೬) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯ CDA ರವರಿಂದ ಬಿಹಾರಿ ವಾಜಪೇಯಿ ಬಡಾವಣೆ ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಯೋಜನೆಯನ್ನು ಯಾವಾಗ ಪ್ರಾರಂಭ ಮಾಡಲಾಯಿತು ಹಾಗೂ ಇದುವರೆವಿಗೂ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ಸಂಪೂರ್ಣ ವಿವರ ಒದಗಿಸುವುದು)

(ಇ) ಕಾಮಗಾರಿ ಕೈಗೆತ್ತಿಕೊಳ್ಳುವ ಮುಂಚೆ ಸರಿಯಾದ ರೀತಿಯಲ್ಲಿ ಯೋಜನೆ ರೂಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಕಾಮಗಾರಿ ವಿಳಂಬವಾಗಲು ಯಾರು ಹೊಣೆ ಹಾಗೂ ಅವರ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆ ;

(ಉ) ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?

## ತೋಟಗಾರಿಕೆ ಅಭಿವೃದ್ಧಿ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೨೫೦ (೨೨೯) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಬೇರೆ ಬೇರೆ ಭಾಗಗಳಲ್ಲಿನ ಸರ್ಕಾರಿ ತೋಟಗಾರಿಕೆಗಳನ್ನು ಅಭಿವೃದ್ಧಿ ಮಾಡಲು ಸರ್ಕಾರ ನೀಡಿರುವ ಅನುದಾನವೆಷ್ಟು ;

(ಆ) ಹಾಗಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಎಷ್ಟು ಸರ್ಕಾರಿ ತೋಟಗಾರಿಕೆಗಳನ್ನು ಅಭಿವೃದ್ಧಿಪಡಿಸಲಾಗಿದೆ ;

(ಇ) ಸರ್ಕಾರಿ ತೋಟಗಾರಿಕೆಗಳನ್ನು ನಿರ್ಮಿಸಲು ಸರ್ಕಾರ ಗುರುತಿಸಿರುವ ಜಾಗ ಎಷ್ಟು ಮತ್ತು ಎಲ್ಲೆಲ್ಲಿ ಗುರುತಿಸಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಅನುದಾನ ಸದ್ಬಳಕೆ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೨೫೧ (೨೨೫) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವಂತಹ ಗ್ರಾಮಗಳಿಗೆ ಮೂಲಭೂತ ಸೌಕರ್ಯಗಳು ತಲುಪುತ್ತಿವೆಯೇ ;

(ಆ) ಹಾಗಿದ್ದಲ್ಲಿ, ಇನ್ನೂ ಎಷ್ಟೆಷ್ಟು ಗ್ರಾಮಗಳು ಅಭಿವೃದ್ಧಿ ಕಾಣದೆ ಹಾಗೆ ಉಳಿದುಕೊಂಡಿರುತ್ತವೆ ;

(ಇ) ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿ ವ್ಯಾಪ್ತಿಗೆ ಸರ್ಕಾರದ ವತಿಯಿಂದ ಬಿಡುಗಡೆ ಮಾಡಿರುವ ಹಣವೆಷ್ಟು ; ಇದುವರೆವಿಗೂ ಆಗಿರುವ ಖರ್ಚು ಎಷ್ಟು ; ಉಳಿದುಕೊಂಡ ಅನುದಾನವೆಷ್ಟು ;

(ಈ) ಸದರಿ ಅನುದಾನವನ್ನು ಯಾವ ಯಾವ ವಿಭಾಗಕ್ಕೆ ಬಳಸಲಾಗುತ್ತದೆ ? (ತಾಲ್ಲೂಕುವಾರು ವಿವರ ನೀಡುವುದು)

## ಕೋಲಾರ ಡಿ.ಸಿ.ಸಿ ಬ್ಯಾಂಕ್‌ನಿಂದ ನೀಡಿರುವ ಸಾಲಗಳ ಬಗ್ಗೆ

**ಶ್ರೀ ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೨ (೨೧೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಕೋಲಾರ ಡಿ.ಸಿ.ಸಿ. ಬ್ಯಾಂಕ್ ವತಿಯಿಂದ ನೀಡಲಾಗಿರುವ ಸಾಲದ ಮೊತ್ತವೆಷ್ಟು ; (ವರ್ಷ ಹಾಗೂ ವಿಧಾನಸಭಾ ಕ್ಷೇತ್ರಗಳವಾರು ವಿವರ ನೀಡುವುದು)

(ಆ) ಇದರಲ್ಲಿ ೦% ಬಡ್ಡಿ ದರ, ೪% ಬಡ್ಡಿ ದರ ಮತ್ತು ೪% ಬಡ್ಡಿಗಿಂತ ಹೆಚ್ಚಿನ ಬಡ್ಡಿಗೆ ನೀಡಿರುವ ಸಾಲದ ಮೊತ್ತವೆಷ್ಟು ; (ವರ್ಷ ಹಾಗೂ ವಿಧಾನಸಭಾ ಕ್ಷೇತ್ರಗಳವಾರು ವಿವರ ನೀಡುವುದು)

(ಇ) ಈ ಸಾಲಗಳಿಗೆ ಕಳೆದ ೩ ವರ್ಷಗಳಲ್ಲಿ ಸರ್ಕಾರದಿಂದ ಬಂದಿರುವ ಸಬ್ಸಿಡಿ ಮೊತ್ತವೆಷ್ಟು ; ಮತ್ತು ಸಬ್ಸಿಡಿ ಹಣವನ್ನು ನೀಡುವಾಗ ಸರ್ಕಾರ ಅನುಸರಿಸಿರುವ ಮಾನದಂಡಗಳೇನು ;

(ಈ) ಸ್ತ್ರೀಶಕ್ತಿ ಸಂಘಗಳ ಸದಸ್ಯರುಗಳಿಗೆ ೦% ಬಡ್ಡಿ ದರದಲ್ಲಿ ಸಾಲ ನೀಡುವಾಗ ಬ್ಯಾಂಕ್‌ಗಳು ಅನುಸರಿಸಬೇಕಾಗಿರುವ ನಿಯಮಗಳೇನು ;

(ಉ) ಇಂತಹ ಸಾಲಗಳನ್ನು ನೀಡುವಾಗ ಪ್ರತಿ ಸೊಸೈಟಿಗಳು ವೈಭಯುತವಾಗಿ ಕಾರ್ಯಕ್ರಮಗಳನ್ನು ನಡೆಸುವ ಅವಶ್ಯಕತೆ ಇದೆಯೇ ; ಈ ಕಾರ್ಯಕ್ರಗಳಿಗೆ ತಗಲುವ ವೆಚ್ಚವನ್ನು ಭರಿಸುವವರಾರು ; (ವಿವರಗಳನ್ನು ನೀಡುವುದು)

(ಊ) ಇಂತಹ ವೈಭವಯುತ ಕಾರ್ಯಕ್ರಮಗಳನ್ನು ರದ್ದುಗೊಳಿಸಿ ಅರ್ಹ ಫಲಾನುಭವಿಗಳ ಖಾತೆಗಳಿಗೆ ನೇರವಾಗಿ ಸಾಲದ ಮೊತ್ತವನ್ನು ಜಮೆ ಮಾಡಲು ಸರ್ಕಾರ ಕ್ರಮಕೈಗೊಳ್ಳುವುದೇ ;

(ಋ) ಹಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು ? (ವಿವರಗಳನ್ನು ನೀಡುವುದು)

## ಗಣಿಗಾರಿಕೆಯಿಂದ ಜಿಲ್ಲಾಧಿಕಾರಿಗಳ ನಿಧಿಗೆ ಸಂಗ್ರಹವಾಗಿರುವ ಮೊತ್ತ

**ಶ್ರೀ ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೩ (೧೮೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಲ್ಲಿ ಗಣಿಗಾರಿಕೆ ನಡೆಯುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಈ ಗಣಿಗಾರಿಕೆಯಿಂದ ಜಿಲ್ಲಾಧಿಕಾರಿಗಳ ನಿಧಿಗೆ (ಡಿ.ಎಂ.ಫಂಡ್) ಸಂಗ್ರಹವಾಗಿರುವ ಮೊತ್ತವೆಷ್ಟು ; (ವಿವರಗಳನ್ನು ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಸಂಗ್ರಹವಾಗಿರುವ ಈ ಮೊತ್ತದಲ್ಲಿ ಇದುವರೆವಿಗೂ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಜಿಲ್ಲಾಧಿಕಾರಿಗಳ ನಿಧಿಗೆ(ಡಿ.ಎಂ. ಫಂಡ್) ಸಂಗ್ರಹ ಮಾಡುತ್ತಿರುವ ಮೊತ್ತವನ್ನು ಪಡೆಯುವಾಗ ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು ?

## ಯಾದಗಿರಿ ಜಿಲ್ಲೆಯ ಕಡೆಚೂರು ಕೈಗಾರಿಕಾ ಪ್ರದೇಶಗಳಲ್ಲಿ ಸ್ಥಳೀಯರಿಗೆ ಉದ್ಯೋಗವಕಾಶ

**ಶ್ರೀ ಬಿ.ಜಿ. ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೪ (೧೬೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಯಾದಗಿರಿ ಜಿಲ್ಲೆಯ ಕಡೆಚೂರು ಕೈಗಾರಿಕಾ ಪ್ರದೇಶಾಭಿವೃದ್ಧಿಗಾಗಿ ಎಷ್ಟು ಎಕರೆ ಭೂಮಿಯನ್ನು ನೀಡಲಾಗಿದೆ ;

(ಆ) ಯಾದಗಿರಿ ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಉತ್ತಮ ಅವಕಾಶಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕೈಗಾರಿಕೆಗಳನ್ನು ಸ್ಥಾಪಿಸಿ ಉದ್ಯೋಗ ಅರಸಿ ವಲಸೆ ಹೋಗುತ್ತಿರುವ ಯುವ ಜನತೆಗೆ ಸ್ಥಳೀಯವಾಗಿ ಉದ್ಯೋಗ ನೀಡಲು ಸರ್ಕಾರ ಕ್ರಮ ವಹಿಸುವುದೇ ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ KUWSSB ವತಿಯಿಂದ ಕೈಗೊಂಡ ಯೋಜನೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೫ (೨೮೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ KUWSSB ವತಿಯಿಂದ ೨೦೧೬–೧೭ ರಿಂದ ೨೦೧೯–೨೦ರವರೆಗೆ ಅನುಷ್ಠಾನಗೊಳಿಸಲು ಕೈಗೊಂಡ ಯೋಜನೆಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮೇಲ್ಕಂಡ ಯೋಜನೆಗಳಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಸದರಿ ಯೋಜನೆಗಳ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆಯೇ ? (ಸಂಪೂರ್ಣ ವಿವರ ನೀಡುವುದು)

## ಚಾಮರಾಜನಗರ ಒಳಚರಂಡಿ ಅವ್ಯವಸ್ಥೆ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೬ (೨೧೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ನಗರಸಭೆ ವ್ಯಾಪ್ತಿಯಲ್ಲಿ ಒಳಚರಂಡಿ ಕಾಮಗಾರಿ ಪೂರ್ಣಗೊಂಡಿದೆಯೇ ; ಇನ್ನೂ ಯಾವ ಯಾವ ಕಾಮಗಾರಿಗಳು ಬಾಕಿ ಇವೆ ; ಈ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು ;

(ಆ) ಈಚೆಗೆ ಸುರಿದ ಮಳೆಯಿಂದ ನಗರದ ಬೀದಿಗಳಲ್ಲಿ ಒಳಚರಂಡಿ ಕೊಳಚೆ ನೀರು ಉಕ್ಕಿ ಹರಿದು ನಗರದ ನಾಗರಿಕರಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅವೈಜ್ಞಾನಿಕ ಒಳಚರಂಡಿ ಕಾಮಗಾರಿ ಇದಕ್ಕೆ ಕಾರಣವಾಗಿದೆಯೇ ; ಇದನ್ನು ಸರಿಪಡಿಸಿ, ಒಳಚರಂಡಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮ ಜರುಗಿಸಲಾಗುವುದೇ ?

## ಹುಣಸೂರು ನಗರದಲ್ಲಿರುವ ಅನಧಿಕೃತ ಬಡಾವಣೆಗಳು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೭ (೨೨೧) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಣಸೂರು ನಗರದಲ್ಲಿರುವ ಅನಧಿಕೃತ ಬಡಾವಣೆಗಳ ಸಂಖ್ಯೆ ಎಷ್ಟು ; ಈ ಬಡಾವಣೆಗಳನ್ನು ಅಧಿಕೃತಗೊಳಿಸುವಂತೆ ಸಾರ್ವಜನಿಕರು ಒತ್ತಾಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇವುಗಳನ್ನು ಅಧಿಕೃತ ಬಡಾವಣೆಗಳನ್ನಾಗಿ ಪರಿವರ್ತಿಸಿ, ಮೂಲಭೂತ ಸೌಲಭ್ಯಗಳನ್ನು ಒದಗಿಸಿ, ನಗರದ ವ್ಯವಸ್ಥಿತ ಬೆಳವಣಿಗೆಗೆ ಕ್ರಮ ತೆಗೆದುಕೊಳ್ಳಲಾಗುವುದೇ ?

## ಮೈಸೂರಿನ ಗನ್‌ಹೌಸ್ ಬಳಿ ಪ್ರಯಾಣಿಕರ ತಂಗುದಾಣ ನಿರ್ಮಿಸುವ ಕುರಿತು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೮ (೨೨೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರಿನಿಂದ ನಂಜನಗೂಡು, ಚಾಮರಾಜನಗರ ಕಡೆಗೆ ಹೋಗುವ ನೂರಾರು ಪ್ರಯಾಣಿಕರು, ಪ್ರತಿದಿನವೂ ಮೈಸೂರಿನ ಗನ್‌ಹೌಸ್ ಬಳಿ ರಸ್ತೆಯಲ್ಲಿ ನಿಂತು ಬಸ್ ಹತ್ತುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹೆಚ್ಚಿನ ಪ್ರಯಾಣಿಕರು ಇಲ್ಲಿಂದಲೇ ನಂಜನಗೂಡು ಕಡೆಗೆ ಬಸ್ ಹತ್ತುವುದರಿಂದ, ಇಲ್ಲಿ ಪ್ರಯಾಣಿಕರಿಗೆ ಬಿಸಿಲು ಮಳೆಯಿಂದ ರಕ್ಷಣೆ ಒದಗಿಸಲು ಒಂದು ಬಸ್ ನಿಲ್ದಾಣವನ್ನು ನಿರ್ಮಿಸಿ, ಪ್ರಯಾಣಿಕರಿಗೆ ಅನುಕೂಲ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 043/450 ಪ್ರತಿಗಳು/15–09–2020